ಸಂಪುಟ : 11 ಸಂಚಿಕೆ: 117 ಪುಟ : 4+2 ಬೆಲೆ: 3.00 ಬುಧವಾರ ಜೂನ್ 10 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ


ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 117 Pages : 4+2 Price : 3.00 Wednesday june 10 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಜೂ. 16ರ ಬೃಹತ್ ಪ್ರತಿಭಟನೆಗೆ ಇಂದು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ



ಹಿರಿಯ ಕಾಂಗ್ರೆಸ್ ನಾಯಕ ಹಾಗೂ ಗದಗ ಶಾಸಕ ಎಚ್.ಕೆ.ಪಾಟೀಲ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಜೂನ್ 16ರಂದು ನಗರದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದ್ದು, ಅದರ ಪೂರ್ವಸಿದ್ಧತೆಯ ಅಂಗವಾಗಿ ಎಚ್.ಕೆ. ಪಾಟೀಲ ಅಭಿಮಾನಿ ಬಳಗದ ವತಿಯಿಂದ ಜೂನ್ 10ರಂದು ಸಂಜೆ 4 ಗಂಟೆಗೆ ಪೂರ್ವಭಾವಿ ಸಭೆ ಆಯೋಜಿಸಲಾಗಿದೆ.

ನಗರದ ದಿ. ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿ ನಡೆಯಲಿರುವ ಸಭೆಯಲ್ಲಿ ಕಾಂಗ್ರೆಸ್ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ವಿವಿಧ ಘಟಕಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಲಿದ್ದಾರೆ.

ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ್, ಗ್ರಾಮ ಪಂಚಾಯತ್, ಎಪಿಎಂಸಿ, ನಗರಸಭೆ, ಪಟ್ಟಣ ಪಂಚಾಯಿತಿ ಹಾಗೂ ಪುರಸಭೆಗಳ ಅಧ್ಯಕ್ಷರು ಮತ್ತು ಸದಸ್ಯರು ಸೇರಿದಂತೆ ಪಕ್ಷದ ವಿವಿಧ ಸಂಘಟನೆಗಳ ಪ್ರತಿನಿಧಿಗಳಿಗೆ ಸಭೆಗೆ ಆಹ್ವಾನ ನೀಡಲಾಗಿದೆ.

ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ ಘಟಕ, ಅಲ್ಪಸಂಖ್ಯಾತರ ಘಟಕ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗಗಳ ಘಟಕ, ಸಾಮಾಜಿಕ ಜಾಲತಾಣ ವಿಭಾಗ, ರಾಜೀವ್ ಗಾಂಧಿ ಪಂಚಾಯತ್ ಸಂಘಟನೆ, ಮಾಜಿ ಸೈನಿಕರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ, ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಹಾಗೂ ಖೇತ್ ಮಜದೂರ ವಿಭಾಗ, ವೈದ್ಯರ ಮತ್ತು ವೃತ್ತಿಪರ ವಿಭಾಗ, ಶಿಕ್ಷಕರ ಹಾಗೂ ಪದವಿಧರರ ವಿಭಾಗ, ಐಟಿ ಮತ್ತು ಡಾಟಾ ವಿಭಾಗ ಸೇರಿದಂತೆ ವಿವಿಧ ಘಟಕಗಳ ಪದಾಧಿಕಾರಿಗಳು ಮತ್ತು ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ.

ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ಮುಳಗುಂದ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಸುಂಕಾಪುರ ಹಾಗೂ ಗದಗ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪತ್ರಿಕಾ ಪ್ರಕಟಣೆ ಮೂಲಕ ಸಭೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿದ್ದಾರೆ.

### ಮುದ್ರಾ, ಕೃಷಿ ಸಾಲ ವಿತರಣೆಗೆ ವೇಗ ನೀಡಿ-ಬ್ಯಾಂಕುಗಳಿಗೆ ಬಸವರಾಜ ಬೊಮ್ಮಾಯಿ ಖಡಕ್ ಸೂಚನೆ

# ರೈತನಿಗೆ ಸಾಲ ಸಿಗದಿದ್ದರೆ ಅಭಿವೃದ್ಧಿ ಅಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಬ್ಯಾಂಕಿಂಗ್ ವ್ಯವಸ್ಥೆ ಕೇವಲ ಹಣಕಾಸು ವ್ಯವಹಾರಗಳಿಗೆ ಸೀಮಿತವಾಗದೇ ರೈತರು, ಬಡವರು, ಮಹಿಳೆಯರು ಹಾಗೂ ಹಿಂದುಳಿದ ವರ್ಗಗಳ ಆರ್ಥಿಕ ಅಭಿವೃದ್ಧಿಗೆ ಬಲ ತುಂಬಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ನಡೆದ ಜಿಲ್ಲಾ ಮಟ್ಟದ ಬ್ಯಾಂಕುಗಳ ಪ್ರಗತಿ ಪರಿಶೀಲನಾ ಸಭೆ (ಡಿಎಲ್‌ಆರ್‌ಸಿ) ಹಾಗೂ ಜಿಲ್ಲಾ ಮಟ್ಟದ ಬ್ಯಾಂಕುಗಳ ಸಲಹಾ ಸಮಿತಿ (ಡಿಸಿಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

"ಕೃಷಿ ದೇಶದ ಆರ್ಥಿಕತೆಯ ಬೆನ್ನೆಲುಬು. ಕೃಷಿ ಕ್ಷೇತ್ರದಲ್ಲಿ ಒಂದು ಶೇಕಡಾ ಬೆಳವಣಿಗೆಯಾದರೆ ಉತ್ಪಾದನಾ ಕ್ಷೇತ್ರದಲ್ಲಿ ನಾಲ್ಕು ಶೇಕಡಾ ಹಾಗೂ ಸೇವಾ ಕ್ಷೇತ್ರದಲ್ಲಿ ಹತ್ತು ಶೇಕಡಾ ಬೆಳವಣಿಗೆ ಸಾಧ್ಯ. ರೈತರ ಕೊಳ್ಳುವ ಶಕ್ತಿ ಹೆಚ್ಚಿದಾಗ ದೇಶದ ಆರ್ಥಿಕ ಚಟುವಟಿಕೆಗಳೂ ವೇಗ ಪಡೆಯುತ್ತವೆ," ಎಂದು ಹೇಳಿದರು.



ರಾಜ್ಯ ಸರ್ಕಾರ ಶೂನ್ಯ ಬಡ್ಡಿದರದಲ್ಲಿ ಬೆಳೆಸಾಲ ನೀಡುತ್ತಿದ್ದರೂ ಎಲ್ಲ ರೈತರಿಗೆ ಅದರ ಲಾಭ ಸಿಗುತ್ತಿಲ್ಲ. ಹೀಗಾಗಿ ರಾಷ್ಟ್ರೀಕೃತ ಬ್ಯಾಂಕುಗಳು ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಸಾಲ ವಿತರಿಸಿ ರೈತರ ಬೆನ್ನಿಗೆ ನಿಲ್ಲಬೇಕು ಎಂದು ಸೂಚಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಬ್ಯಾಂಕಿಂಗ್ ಸೇವೆಗಳ ವಿಸ್ತರಣೆ ಅಗತ್ಯ. ರಾಷ್ಟ್ರೀಕೃತ ಬ್ಯಾಂಕುಗಳು ಹೊಸ ಶಾಖೆ ಆರಂಭಿಸಿ ಜನರಿಗೆ ಸುಲಭ ಸೇವೆ ಒದಗಿಸಬೇಕು. ಜೊತೆಗೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಮುದ್ರಾ ಯೋಜನೆಯಡಿ ಯುವ ಉದ್ಯಮಿಗಳಿಗೆ ಹೆಚ್ಚಿನ ಸಾಲ ವಿತರಿಸಬೇಕು ಎಂದರು.

ಸ್ವಸಹಾಯ ಸಂಘಗಳು, ಮಹಿಳಾ ಗುಂಪುಗಳು, ಸಣ್ಣ ಕೈಗಾರಿಕೆಗಳು ಹಾಗೂ ಬೀದಿಬದಿ ವ್ಯಾಪಾರಿಗಳಿಗೆ ಸುಲಭ ಸಾಲ ಸೌಲಭ್ಯ ದೊರೆಯಬೇಕು. ಕ್ರೆಡಿಟ್ ಕಾರ್ಡ್ ಸೇರಿದಂತೆ ವಿವಿಧ ಹಣಕಾಸು ನೆರವು ನೀಡುವ ಮೂಲಕ ಅವರ ಜೀವನಮಟ್ಟ ಸುಧಾರಣೆಗೆ ಬ್ಯಾಂಕುಗಳು ಕೈಜೋಡಿಸಬೇಕು ಎಂದು ಹೇಳಿದರು.

> "ರೈತ, ಬಡವರು ಮತ್ತು ಮಹಿಳೆಯರಿಗೆ ಹೆಚ್ಚು ಸಾಲ ಸೌಲಭ್ಯ ನೀಡಿದಾಗ ಮಾತ್ರ ಗ್ರಾಮೀಣ ಆರ್ಥಿಕತೆ ಬಲಿಷ್ಠವಾಗುತ್ತದೆ."
> – ಬಸವರಾಜ ಬೊಮ್ಮಾಯಿ, ಸಂಸದ

ಸಭೆಯಲ್ಲಿ ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ಸಂತೋಷ್ ಎಂ.ವಿ. ಅವರು 2025-26ನೇ ಸಾಲಿನ ನಾಲ್ಕನೇ ತ್ರೈಮಾಸಿಕ ಬ್ಯಾಂಕಿಂಗ್ ಪ್ರಗತಿ ವರದಿ ಮಂಡಿಸಿದರು. ಜಿಲ್ಲೆಯಲ್ಲಿ ಆದ್ಯತಾ ವಲಯದ ಸಾಲ ವಿತರಣೆಯಲ್ಲಿ ಶೇ. 98.73ರಷ್ಟು ಗುರಿ ಸಾಧನೆಯಾಗಿದೆ ಎಂದು ತಿಳಿಸಿದರು.

ಪ್ರಧಾನಮಂತ್ರಿ ಸ್ವನಿಧಿ ಯೋಜನೆಯಡಿ 7,093 ಅರ್ಜಿಗಳು ಮಂಜೂರಾಗಿದ್ದು, 6,944 ಫಲಾನುಭವಿಗಳಿಗೆ ಸಾಲ ವಿತರಿಸಲಾಗಿದೆ ಎಂದು ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಆರ್‌ಬಿಐ ಅಧಿಕಾರಿ ವಿಜಯಶ್ರೀ, ನಬಾರ್ಡ್ ಎಜಿಎಂ ಹನುಮಂತರಾಜು, ಎಸ್‌ಬಿಐ ಪ್ರಾದೇಶಿಕ ವ್ಯವಸ್ಥಾಪಕ ರಾಘವೇಂದ್ರ ರಾವ್ ಸೇರಿದಂತೆ ವಿವಿಧ ಬ್ಯಾಂಕುಗಳ ಅಧಿಕಾರಿಗಳು ಉಪಸ್ಥಿತರಿದ್ದರು.

### 40 ವರ್ಷದ ಸಾರ್ವಜನಿಕ ಸೇವೆಗೆ ಗೌರವ ಸಿಗಲಿ

# ಕಳಂಕರಹಿತ ರಾಜಕಾರಣಿ ಎಚ್.ಕೆ.ಪಿಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಳಂಕರಹಿತ ರಾಜಕಾರಣಿ, ಸರಳ ವ್ಯಕ್ತಿತ್ವ ಹಾಗೂ ದೂರದೃಷ್ಟಿಯ ಚಿಂತನೆ ಹೊಂದಿರುವ ಹಿರಿಯ ನಾಯಕ ಎಚ್. ಕೆ ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನಮಾನ ನೀಡಬೇಕು ಎಂದು ನ್ಯಾಯವಾದಿ ಮೋಹನ ಭಜಂತ್ರಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಜನರಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿ ಗದಗ ಜಿಲ್ಲೆಯನ್ನು ಮಾದರಿ ಅಭಿವೃದ್ಧಿಯತ್ತ ಕೊಂಡೊಯ್ದ ನಾಯಕ ಎಚ್.ಕೆ. ಪಾಟೀಲರು. ಇಂತಹ ನಾಯಕತ್ವ ಜಿಲ್ಲೆಗೂ ಹಾಗೂ ರಾಜ್ಯಕ್ಕೂ ಅಗತ್ಯವಾಗಿದೆ ಎಂದು ಹೇಳಿದರು.

ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಂತಹ ಮಹತ್ವಾಕಾಂಕ್ಷಿ ಯೋಜನೆಗಳಿಗೆ ಎಚ್.ಕೆ. ಪಾಟೀಲರ ವಿಚಾರಧಾರೆ ಹಾಗೂ ಅನುಭವ ಸಹಕಾರಿಯಾಗಿದೆ ಎಂದು ತಿಳಿಸಿದರು.

ವಕೀಲ ಎಸ್.ಕೆ. ಪಾಟೀಲ ಮಾತನಾಡಿ,



"ಎಚ್.ಕೆ. ಪಾಟೀಲರ ಸರಳತೆ, ಅನುಭವ ಹಾಗೂ ಮುಂದಾಲೋಚನೆಯನ್ನು ಪರಿಗಣಿಸಿ ಅವರಿಗೆ ಸಚಿವ ಸ್ಥಾನ ನೀಡಬೇಕು. ನಾಲ್ಕು ದಶಕಗಳ ಸಾರ್ವಜನಿಕ ಸೇವೆಗೆ ಗೌರವ ಸಲ್ಲಿಸುವ ಸಮಯ ಇದು," ಎಂದರು.

ವಕೀಲ ಹುಬ್ಬಳ್ಳಿ ಮಾತನಾಡಿ, 2004-06ರ ಅವಧಿಯಲ್ಲಿ ಕಾನೂನು ಸಚಿವರಾಗಿದ್ದಾಗ ಎಚ್.ಕೆ. ಪಾಟೀಲರು ಹಲವು ಮಹತ್ವದ ಕಾರ್ಯಗಳನ್ನು

> "ಗದಗ ಜಿಲ್ಲೆಯ ಅಭಿವೃದ್ಧಿಗೆ ಎಚ್.ಕೆ. ಪಾಟೀಲರ ಕೊಡುಗೆ ಅಪಾರ. ಇಂತಹ ಅನುಭವಿ ನಾಯಕತ್ವಕ್ಕೆ ಸಚಿವ ಸ್ಥಾನ ಅಗತ್ಯ."
> – ಮೋಹನ ಭಜಂತ್ರಿ

ಜಾರಿಗೊಳಿಸಿದ್ದರು. ಜಿಲ್ಲಾ ನ್ಯಾಯಾಲಯ ಸ್ಥಾಪನೆಗೂ ಅವರ ಶ್ರಮ ಕಾರಣವಾಗಿದೆ ಎಂದು ಹೇಳಿದರು.

ಯಾವುದೇ ಜಾತಿ-ಧರ್ಮಕ್ಕೆ ಸೀಮಿತವಾಗದೆ ಎಲ್ಲರನ್ನು ಒಗ್ಗೂಡಿಸಿಕೊಂಡು ಸಾಗುವ ನಾಯಕತ್ವ ಅವರದ್ದಾಗಿದೆ. ಲಾ ಚೇಂಬರ್‌ಗಳ ಪರಿಕಲ್ಪನೆ ಸೇರಿದಂತೆ ಕಾನೂನು ಕ್ಷೇತ್ರಕ್ಕೆ ಅವರು ನೀಡಿದ ಕೊಡುಗೆಗಳನ್ನು ಪರಿಗಣಿಸಿ ಮತ್ತೆ ಸಚಿವ ಸ್ಥಾನ ನೀಡಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ವಕೀಲ ಸಮೂಹದಿಂದ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಆರ್.ಜಿ ಕಲ್ಲೂರ ಹಾಗೂ ಎಸ್.ಕೆ. ನದಾಫ್, ಕೆ.ಆರ್. ಚೆನ್ನಪ್ಪಗೌಡ, ಅನಿಲ ಸಿಂಗಟಾಲಕೇರಿ, ಟಿ.ಆರ್. ಕೋಮತಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸಚಿವ ಸ್ಥಾನ ನೀಡದಿದ್ದರೆ ರಾಜ್ಯಾದ್ಯಂತ ಉಗ್ರ ಹೋರಾಟ; ಬಸವರಾಜ ಬಿಂಗಿ ಎಚ್ಚರಿಕೆ

# ಗಾಣಿಗ ಸಮಾಜ ಕಡೆಗಣನೆ ಸಹಿಸಲ್ಲ..!

■ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಸರ್ಕಾರದಲ್ಲಿ ಗಾಣಿಗ ಸಮಾಜಕ್ಕೆ ಒಂದೇ ಒಂದು ಸಚಿವ ಸ್ಥಾನ ನೀಡದಿರುವುದು ದುರ್ದೈವದ ಸಂಗತಿ. ಎರಡನೇ ಹಂತದ ಸಚಿವ ಸಂಪುಟ ವಿಸ್ತರಣೆಯಲ್ಲಿ ಗಾಣಿಗ ಸಮುದಾಯದ ಶಾಸಕರಿಗೆ ಅವಕಾಶ ನೀಡಬೇಕು. ಇಲ್ಲವಾದರೆ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಗಾಣಿಗ ಸಮಾಜದ ಮುಖಂಡ ಬಸವರಾಜ ಬಿಂಗಿ ಎಚ್ಚರಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಕ್ಷ್ಮಣ ಸವದಿ, ವೀರೇಂದ್ರ ಪಪ್ಪಿ ಹಾಗೂ ಬಿ.ಕೆ. ಸಂಗಮೇಶ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಸಮಾಜದ ಮುಖಂಡ ಡಾ. ಶೇಖರ್ ಸಜ್ಜನವರ ಮಾತನಾಡಿ, "ರಾಜ್ಯದಲ್ಲಿಯೇ ಅತಿಹೆಚ್ಚು ಮತಗಳ ಅಂತರದಿಂದ ಗೆದ್ದಿರುವ ಹಾಗೂ ಅನುಭವಿ ಹೋರಾಟಗಾರರಾಗಿರುವ



> "ಗಾಣಿಗ ಸಮಾಜದ ಶಕ್ತಿಯನ್ನು ಕಡೆಗಣಿಸಿದರೆ ರಾಜ್ಯಾದ್ಯಂತ ಹೋರಾಟಕ್ಕೆ ಇಳಿಯಬೇಕಾಗುತ್ತದೆ."
> – ಬಸವರಾಜ ಬಿಂಗಿ

ಲಕ್ಷ್ಮಣ ಸವದಿ ರಾಜ್ಯದ ಪ್ರಮುಖ ನಾಯಕರಾಗಿದ್ದಾರೆ. ಅವರನ್ನು ಸಚಿವರನ್ನಾಗಿ ಮಾಡುವುದು ಸಮಾಜದ ಬಹುದಿನಗಳ ಬೇಡಿಕೆ," ಎಂದರು. ಬಿಜೆಪಿಯಿಂದ ಕಾಂಗ್ರೆಸ್‌ಗೆ ಕರೆತರುವ ಸಂದರ್ಭದಲ್ಲಿ ಸಚಿವ ಸ್ಥಾನ ನೀಡುವ ಭರವಸೆ ನೀಡಲಾಗಿತ್ತು. ಈಗ ಆ ಭರವಸೆ ಈಡೇರಿಸುವ ಸಮಯ ಬಂದಿದೆ ಎಂದು ಹೇಳಿದರು.

ನಿಂಗಪ್ಪ ಕೆಂಗಾರ ಮಾತನಾಡಿ, "ಹಿಂದಿನ ಸರ್ಕಾರದಲ್ಲಿ ಲಕ್ಷ್ಮಣ ಸವದಿ ಉತ್ತಮ ಆಡಳಿತ ನೀಡಿದ್ದಾರೆ. ರಾಜ್ಯದಲ್ಲಿ ಗಾಣಿಗ ಸಮಾಜವನ್ನು ಒಗ್ಗೂಡಿಸುವ ನಾಯಕತ್ವ ಅವರದು.

ಅವರಿಗೆ ಸಚಿವ ಸ್ಥಾನ ನೀಡದಿದ್ದರೆ ಹೋರಾಟ ತೀವ್ರಗೊಳ್ಳಲಿದೆ," ಎಂದು ಎಚ್ಚರಿಸಿದರು.

▶▶ 2ನೇ ಪುಟಕ್ಕೆ

### ಉತ್ತರ ಕರ್ನಾಟಕದ ಪ್ರಾಮಾಣಿಕ ನಾಯಕತ್ವಕ್ಕೆ ಗೌರವ ಸಿಗಲಿ; ಮೆಕ್ಯಾನಿಕಲ್ ಸಂಘ ಆಗ್ರಹ

# ಪ್ರಾಮಾಣಿಕ ನಾಯಕತ್ವಕ್ಕೆ ಗೌರವ ಕೊಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಉತ್ತರ ಕರ್ನಾಟಕದ ಪ್ರಾಮಾಣಿಕ ಹಾಗೂ ಅನುಭವಿ ನಾಯಕರಾಗಿರುವ ಎಚ್.ಕೆ.ಪಾಟೀಲ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಮೆಕ್ಯಾನಿಕಲ್ ಸಂಘದ ಅಧ್ಯಕ್ಷ ಉಸ್ಮಾನ್ ಮಾಳೆಕೊಪ್ಪ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಮೆಕ್ಯಾನಿಕಲ್ ಹುದ್ದೆ ಎನ್ನುವ ಕೀಳರಿಮೆಯಲ್ಲಿದ್ದ ನಮ್ಮನ್ನು ಒಂದೇ ವೇದಿಕೆಗೆ ತಂದು ಸಂಘಟಿಸುವಲ್ಲಿ ಶಾಸಕ ಎಚ್.ಕೆ. ಪಾಟೀಲರ ಪಾತ್ರ ಮಹತ್ವದ್ದಾಗಿದೆ" ಎಂದು ಹೇಳಿದರು.

ಸಂಘದ ಶಕ್ತಿ ಮತ್ತು ಸಾಮರ್ಥ್ಯದ ಅರಿವು ಮೂಡಿಸಿದ ಎಚ್.ಕೆ. ಪಾಟೀಲರು, ಸಂಘದ ಅಭಿವೃದ್ಧಿಗಾಗಿ



> "ಮೆಕ್ಯಾನಿಕಲ್ ಸಮುದಾಯಕ್ಕೆ ಆತ್ಮವಿಶ್ವಾಸ ತುಂಬಿದ ನಾಯಕ ಎಚ್.ಕೆ. ಪಾಟೀಲರು. ಅವರಿಗೆ ಸಚಿವ ಸ್ಥಾನ ನೀಡುವುದು ನ್ಯಾಯ."
> – ಉಸ್ಮಾನ್ ಮಾಳೆಕೊಪ್ಪ

1.26 ಎಕರೆ ಜಾಗ ನೀಡಿ ಶೆಡ್ ನಿರ್ಮಾಣಕ್ಕೂ ಸಹಕಾರ ನೀಡಿದ್ದಾರೆ. ರಕ್ತದಾನ, ಅಂಗಾಂಗ ದಾನ ಸೇರಿದಂತೆ ಹಲವು ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಲು ನಮಗೆ ಪ್ರೇರಣೆ ನೀಡಿದ್ದಾರೆ ಎಂದು ತಿಳಿಸಿದರು.

"ಯಾವುದೇ ಕಪ್ಪು ಚುಕ್ಕೆ ಇಲ್ಲದ, ಜನಪರ ಕೆಲಸ ಮಾಡಿದ ಇಂತಹ ನಾಯಕರಿಗೆ ಸಚಿವ ಸ್ಥಾನ ನೀಡಬೇಕು" ಎಂದು ಒತ್ತಾಯಿಸಿದರು.

ಬಿ.ಎಂ. ನದ್ದಿಮುಲ್ಲಾ ಮಾತನಾಡಿ, "ಉತ್ತರ ಕರ್ನಾಟಕದಲ್ಲಿ ಪ್ರಾಮಾಣಿಕ ನಾಯಕತ್ವ ನೀಡುತ್ತಿರುವ ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ನೀಡದಿರುವುದು ನೋವಿನ ಸಂಗತಿ.

ಅವರ ಕುಟುಂಬ ಪೀಳಿಗೆಯಿಂದ ಜನಸೇವೆಯಲ್ಲಿ ತೊಡಗಿಕೊಂಡಿದ್ದು, ಇಂತಹ ಅನುಭವಿ ನಾಯಕರಿಗೆ ಸೂಕ್ತ ಸ್ಥಾನಮಾನ ಸಿಗಬೇಕು," ಎಂದರು.

ಈ ವೇಳೆ ಮಹಮದ್ ಶಬ್ಬೀರ, ನಿಂಗಪ್ಪ ಎಂಬತ್ತನಾಳ, ಸೈಯದ್ ಜಮೀರ್ ಖಾಜಿ, ಮಹಮದ್ ಅಲಿ ನವಲಗುಂದ, ಅಬ್ದುಲ್ ಖಾದರ್, ಸಿರಾಜ್ ಬಾಗಲಕೋಟೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಾಳೆ ವಿದ್ಯುತ್ ವ್ಯತ್ಯಯ

**ಲಕ್ಷ್ಮೇಶ್ವರ, ಬಾಗೇವಾಡಿ, ಬೆಳ್ಳಟ್ಟಿ ಉಪಕೇಂದ್ರಗಳಲ್ಲಿ ನಿರ್ವಹಣಾ ಕಾಮಗಾರಿ**

**■ವಿಜಯಸಾಕ್ಷಿ ಸುದ್ದಿ, ಗದಗ**

110 ಕೆವ್ಹಿ ಲಕ್ಷ್ಮೇಶ್ವರ, ಬಾಗೇವಾಡಿ ಹಾಗೂ ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಜೂನ್ 11ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ ಎಂದು ಹೆಸ್ಕಾಂ ಪ್ರಕಟಣೆ ತಿಳಿಸಿದೆ.

110 ಕೆವ್ಹಿ ಲಕ್ಷ್ಮೇಶ್ವರ, ಬಾಗೇವಾಡಿ ಹಾಗೂ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ ಎಲ್ಲಾ 11 ಕೆವ್ಹಿ ವಿತರಣಾ ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಇದರೊಂದಿಗೆ 33 ಕೆವ್ಹಿ ಎಂಎಂಸಿಎಲ್ ಗಾಳಿಯಂತ್ರ ಘಟಕ, 33 ಕೆವ್ಹಿ ಸೋಮೇಶ್ವರ ಸ್ಪಿನ್ನಿಂಗ್ ಮಿಲ್, ಸೋಲಾರ್-1, ಸೋಲಾರ್-2, 110 ಕೆವ್ಹಿ ಎನಾರಕಾನ್, 110 ಕೆವ್ಹಿ ಆದಿತ್ಯ ಬಿರ್ಲಾ ಸೋಲಾರ್, 33 ಕೆವ್ಹಿ ಜಾಲವಾಡಗಿ ನೀರು ಸರಬರಾಜು ಉಪಕೇಂದ್ರ, 33 ಕೆವ್ಹಿ ಸೂರಣಗಿ ಹಾಗೂ 33 ಕೆವ್ಹಿ ಹೊಳೆಇಟಗಿ ಉಪಕೇಂದ್ರಗಳ ವ್ಯಾಪ್ತಿಯ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲೂ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಸಾರ್ವಜನಿಕರು ಸಹಕರಿಸುವಂತೆ ಹೆಸ್ಕಾಂ ಮನವಿ ಮಾಡಿದೆ.

# ಗಾಣಿಗ ಸಮಾಜ ಕಡೆಗಣನೆ ಸಹಿಸಲ್ಲ..!

▶▶ಮೊದಲನೇ ಪುಟದಿಂದ

ಜಾತ್ಯತೀತ ಸರ್ಕಾರ ಹಿಂದುಳಿದ ಹಾಗೂ ತುಳಿತಕ್ಕೊಳಗಾದ ಸಮುದಾಯಗಳಿಗೆ ನ್ಯಾಯ ಒದಗಿಸಬೇಕು. ಉತ್ತರ ಕರ್ನಾಟಕದಲ್ಲಿ 30ರಿಂದ 40 ಶಾಸಕರನ್ನು ಗೆಲ್ಲಿಸುವ ಸಾಮರ್ಥ್ಯ ಗಾಣಿಗ ಸಮಾಜಕ್ಕಿದೆ. ಈ ಶಕ್ತಿಯನ್ನು ಸರ್ಕಾರ ಲಘುವಾಗಿ ತೆಗೆದುಕೊಳ್ಳಬಾರದು ಎಂದು ಮುಖಂಡರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಅಶೋಕ ಮಂದಾಲಿ, ಗಿರಿಯಪ್ಪ ಅಸೂಟಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.

**200 ಕೆರೆ, 3 ಸಾವಿರ ಕೊಳವೆಬಾವಿಗಳಿಗೆ ಮರುಜೀವ ನೀಡಿ ಸಾವಿರಾರು ರೈತರಿಗೆ ಆಶಾಕಿರಣವಾದ ಸಿಕಂದರ್ ಮೀರಾನಾಯಕ್**

# ಬರದ ನೆಲದಲ್ಲಿ ಜಲಕ್ರಾಂತಿ ಮೂಡಿಸಿದ ಜಲಯೋಧ

ಉತ್ತರ ಕರ್ನಾಟಕದ ಹಲವೆಡೆ ಬೇಸಿಗೆ ಆರಂಭವಾದರೆ ಸಾಕು, ನೀರಿಗಾಗಿ ಜನರು ಕಿಲೋಮೀಟರ್‌ಗಳಷ್ಟು ದೂರ ಅಲೆದಾಡುವ ಪರಿಸ್ಥಿತಿ ಇಂದಿಗೂ ಮುಂದುವರಿದಿದೆ. ಬತ್ತಿದ ಕೆರೆಗಳು, ಒಣಗಿದ ಕೊಳವೆಬಾವಿಗಳು ಮತ್ತು ನೀರಿನ ಕೊರತೆಯಿಂದ ಸಂಕಷ್ಟ ಅನುಭವಿಸುವ ರೈತರ ಬದುಕಿನ ನಡುವೆ ಗದಗ ಜಿಲ್ಲೆಯ ಕೋಟುಮಚಗಿ ಗ್ರಾಮದ ಸಿಕಂದರ್ ಮೀರಾನಾಯಕ್ ಜಲ ಸಂರಕ್ಷಣೆಯ ಮೂಲಕ ಹೊಸ ಆಶಾಕಿರಣವಾಗಿ ಹೊರಹೊಮ್ಮಿದ್ದಾರೆ.

ಕಳೆದ ಒಂದೂವರೆ ದಶಕದಲ್ಲಿ ಸುಮಾರು 200 ಕೆರೆಗಳನ್ನು ಪುನಶ್ಚೇತನಗೊಳಿಸಿ, 3 ಸಾವಿರಕ್ಕೂ



ಹೆಚ್ಚು ಬತ್ತಿಹೋಗಿದ್ದ ಕೊಳವೆಬಾವಿಗಳಿಗೆ ಮರುಜೀವ ನೀಡಿರುವ ಸಿಕಂದರ್ ಇಂದು "ಬರದನಾಡಿನ ಭಗೀರಥ" ಎಂದು ಗುರುತಿಸಿಕೊಂಡಿದ್ದಾರೆ.




> "ಜನರು ನೀರಿಗಾಗಿ ಅನುಭವಿಸುತ್ತಿದ್ದ ನೋವೇ ನನ್ನ ಶಕ್ತಿಯಾಯಿತು. ಬತ್ತಿಹೋಗಿದ್ದ ಬೋರ್‌ವೆಲ್‌ಗಳಿಗೆ ಮರುಜೀವ ನೀಡುವುದೇ ನನ್ನ ಜೀವನದ ಧ್ಯೇಯ."
>
> **– ಸಿಕಂದರ್ ಮೀರಾನಾಯಕ್**

ಬರಗಾಲದ ನೋವನ್ನು ಬಾಲ್ಯದಲ್ಲೇ ಕಂಡ ಸಿಕಂದರ್, ನೀರಿಗಾಗಿ ಜನರು ನಾಲ್ಕು ಕಿಲೋಮೀಟರ್ ದೂರ ನಡೆದು ಹೋಗುತ್ತಿದ್ದ ದೃಶ್ಯಗಳನ್ನು ನೋಡಿ ಬೆಳೆದವರು. ರೈತರ ಕಷ್ಟಗಳು ಅವರ ಮನಸ್ಸಿನಲ್ಲಿ ಆಳವಾದ ಪ್ರಭಾವ ಬೀರಿದವು. ಇದೇ ನೋವು ಮುಂದೆ ಸಮಾಜಸೇವೆಯ ಸಂಕಲ್ಪವಾಗಿ ರೂಪುಗೊಂಡಿತು.

ಸಾಮಾಜಿಕ ಕಾರ್ಯದಲ್ಲಿ ಪದವಿ ಪಡೆದ ಬಳಿಕ ಅವರು ಹಾವೇರಿಯಲ್ಲಿ ನೀರಿನ ಸಂರಕ್ಷಣಾ ಯೋಜನೆಗಳಲ್ಲಿ ಕೆಲಸ ಮಾಡಿದರು. ನಂತರ ಬೆಂಗಳೂರಿನ ಮಳೆನೀರು ಕೊಯ್ಲು ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುವ ಮೂಲಕ ತಾಂತ್ರಿಕ ಜ್ಞಾನ ಸಂಪಾದಿಸಿದರು.

ಹುಬ್ಬಳ್ಳಿಯ ಆಘುಠಿಚಿಟಿಜಜ ದೇಶಪಾಂಡೆ ಫೌಂಡೇಶನ್ ಸಿಇಒ ನವೀನ್ ಝಾ ಅವರ ಪ್ರೋತ್ಸಾಹದಿಂದ 2008ರಲ್ಲಿ "ಸಂಕಲ್ಪ ಗ್ರಾಮೀಣ ಅಭಿವೃದ್ಧಿ ಸಂಸ್ಥೆ" ಸ್ಥಾಪಿಸಿದರು. ದೇಶಪಾಂಡೆ ಫೌಂಡೇಶನ್ ನೀಡಿದ 30 ಸಾವಿರ ರೂ. ಬೀಜಧನದಿಂದ ಕಾರ್ಯ ಆರಂಭಿಸಿದ ಅವರು, ನಂತರ ಅಖಖ ನೆರವಿನ ಮೂಲಕ ತಮ್ಮ ಕಾರ್ಯವನ್ನು ವಿಸ್ತರಿಸಿದರು.

ಇಂದು 25 ಸಿಬ್ಬಂದಿಯ ತಂಡದೊಂದಿಗೆ ಗದಗ, ಕೊಪ್ಪಳ, ರಾಯಚೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಜಲ ಸಂರಕ್ಷಣಾ ಕಾರ್ಯ ನಡೆಸುತ್ತಿದ್ದಾರೆ.

ಮುಂಡರಗಿ ಭಾಗದಲ್ಲಿ 150 ಕೆರೆಗಳ ಪುನಶ್ಚೇತನ ಕಾರ್ಯ ಕೈಗೊಂಡಿರುವ ಸಿಕಂದರ್ ಅವರ ಕೆಲಸಕ್ಕೆ ರೈತರು ಮತ್ತು ಸಾಮಾಜಿಕ ವಲಯದಲ್ಲಿ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ.

ಸಮಾಜದ ಸಹಕಾರದೊಂದಿಗೆ ಸಾವಿರಾರು ಕುಟುಂಬಗಳಿಗೆ ನೀರಿನ ಭದ್ರತೆ ಒದಗಿಸಿರುವ ಸಿಕಂದರ್, ಉತ್ತರ ಕರ್ನಾಟಕದ ನಿಜವಾದ "ಜಲಯೋಧ"ರಾಗಿದ್ದಾರೆ.

**–ಕೆ.ಆರ್. ದೊಡ್ಡಮನಿ, ಡಂಬಳ**

# ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿಗೆ ಗದಗದ ನಾಗಸಮುದ್ರ ರಸ್ತೆ, ನರಸಾಪೂರದಲ್ಲಿರುವ ಸರಕಾರಿ ಪಾಲಿಟೆಕ್ನಿಕ್ ಗದಗ ಸಂಸ್ಥೆಯಲ್ಲಿ ಸಿವಿಲ್, ಮೆಕ್ಯಾನಿಕಲ್, ಇ&ಸಿ ಹಾಗೂ ಕಂಪ್ಯೂಟರ್ ಸೈನ್ಸ್ ವಿಭಾಗಗಳ 2ನೇ ವರ್ಷ/3ನೇ ಸೆಮಿಸ್ಟರ್ ಡಿಪ್ಲೊಮಾ ಕೋರ್ಸ್‌ಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅಭ್ಯರ್ಥಿಗಳು ಐಟಿಐ ಅಥವಾ ದ್ವಿತೀಯ ಪಿಯುಸಿ (ವಿಜ್ಞಾನ) ತಾಂತ್ರಿಕ ವಿಷಯಗಳಲ್ಲಿ ಉತ್ತೀರ್ಣರಾಗಿರಬೇಕು. ಅರ್ಜಿ ಸಲ್ಲಿಸಲು ಜೂನ್ 23 ಕೊನೆಯ ದಿನವಾಗಿದೆ.

ಪ್ರವೇಶ ಬಯಸುವ ಅಭ್ಯರ್ಥಿಗಳು [ತಾಂತ್ರಿಕ ಶಿಕ್ಷಣ ಇಲಾಖೆ ವೆಬ್‌ಸೈಟ್] (https://dtek.karnataka.gov.in) ನಲ್ಲಿ ಅರ್ಜಿ ನಮೂನೆ ಹಾಗೂ ಇ-ಮಾಹಿತಿ ಪುಸ್ತಕ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಅರ್ಜಿಯನ್ನು ಸಂಪೂರ್ಣ ಭರ್ತಿ ಮಾಡಿ ಅಗತ್ಯ ಮೂಲ ದಾಖಲಾತಿಗಳೊಂದಿಗೆ ಖುದ್ದಾಗಿ ಕಾಲೇಜಿಗೆ ಸಲ್ಲಿಸಬೇಕು. ಲಭ್ಯವಿರುವ ಸೀಟುಗಳಿಗೆ ಮೆರಿಟ್ ಆಧಾರದ ಮೇಲೆ ವೇಳಾಪಟ್ಟಿ ಪ್ರಕಾರ ಪ್ರವೇಶ ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ಸರ್ಕಾರಿ ಪಾಲಿಟೆಕ್ನಿಕ್, ನಾಗಸಮುದ್ರ ರಸ್ತೆ, ನರಸಾಪೂರ, ಗದಗ ಕಾಲೇಜಿನ ಕಚೇರಿಯನ್ನು ಸಂಪರ್ಕಿಸಬಹುದು.

# ಸರ್ಕಾರಿ ಶಾಲೆಗೆ ಸೇರಿಸಿ: ಮಕ್ಕಳ ಭವಿಷ್ಯ ಬೆಳಗಿಸಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಸಕ್ತ ಶೈಕ್ಷಣಿಕ ವರ್ಷ ಆರಂಭವಾಗಿರುವ ಹಿನ್ನೆಲೆಯಲ್ಲಿ ಪಾಲಕರು ಮಕ್ಕಳನ್ನು ಶಾಲೆಗೆ ಕಳುಹಿಸಿ ಅವರ ಶೈಕ್ಷಣಿಕ ಪ್ರಗತಿಗೆ ಸಹಕರಿಸಬೇಕು ಎಂದು ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಶಾಲೆ ನಂ.1ರ ಮುಖ್ಯೋಪಾಧ್ಯಾಯ ಡಿ.ಎನ್. ದೊಡ್ಡಮನಿ ಹೇಳಿದರು.

ಶನಿವಾರ ಎಸ್‌ಡಿಎಂಸಿ ಸಹಯೋಗದಲ್ಲಿ ಆಯೋಜಿಸಿದ್ದ ದಾಖಲಾತಿ ಆಂದೋಲನದ ಅಂಗವಾಗಿ ಮಕ್ಕಳೊಂದಿಗೆ ಪ್ರಭಾತ ಪೇರಿಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸರ್ಕಾರಿ ಶಾಲೆಗಳಲ್ಲಿ ಬಿಸಿಯೂಟ, ಸಮವಸ್ತ್ರ, ಕ್ಷೀರಭಾಗ್ಯ, ಪಠ್ಯಪುಸ್ತಕ ಸೇರಿದಂತೆ ಎಲ್ಲ ಸೌಲಭ್ಯಗಳು ಉಚಿತವಾಗಿ ದೊರೆಯುತ್ತಿವೆ. ಕಳೆದ ವರ್ಷದಿಂದ ಇಂಗ್ಲಿಷ್ ಮಾಧ್ಯಮ ಶಿಕ್ಷಣವೂ ಆರಂಭವಾಗಿದೆ ಎಂದು ಡಿ.ಎನ್. ದೊಡ್ಡಮನಿ ಹೇಳಿದರು.

ಎಸ್‌ಡಿಎಂಸಿ ಅಧ್ಯಕ್ಷ ಯಲ್ಲಪ್ಪ ಶಿರಬಡಗಿ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಕಲಿತ ಮಕ್ಕಳು ಇಂದು ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಖಾಸಗಿ ಶಾಲೆಗಳಿಗೆ ಕಡಿಮೆ ಇಲ್ಲದಂತೆ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದ್ದು, ಪಾಲಕರು ಮಕ್ಕಳನ್ನು ಕನ್ನಡ ಶಾಲೆಗಳಿಗೆ ಸೇರಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಶಿಕ್ಷಕರಾದ ಎಸ್.ಎನ್. ಲಮಾಣಿ, ರಾಜೇಶ್ವರಿ ಅಡರಕಟ್ಟಿ, ಇ.ಎಚ್. ಪೀಟರ್, ಎಸ್.ಎಸ್. ಮಹಾಲಿಂಗಶೆಟ್ಟರ, ಸವಿತಾ ಬೋಮಲೆ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 60 ವರ್ಷದ ಅಸ್ತಮಾ ಯಜ್ಞಕ್ಕೆ ರಾಜ್ಯದ ಮೂಲೆಮೂಲೆಗಳಿಂದ ರೋಗಿಗಳ ಹರಿವು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಆರು ದಶಕಗಳಿಂದ ಅಸ್ತಮಾ ರೋಗಿಗಳಿಗೆ ಉಚಿತ ಆಯುರ್ವೇದ ಔಷಧಿ ವಿತರಿಸುತ್ತಿರುವ ಲಕ್ಷ್ಮೇಶ್ವರದ ಐತಿಹಾಸಿಕ "ಅಸ್ತಮಾ ಯಜ್ಞ" ಈ ವರ್ಷವೂ ಸಾವಿರಾರು ಜನರ ಸಮ್ಮುಖದಲ್ಲಿ ನಡೆಯಿತು. ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ರೋಗಿಗಳು ಹಾಗೂ ಸಾರ್ವಜನಿಕರ ಭಾರೀ ಜನಸ್ತೋಮ ಕಾರ್ಯಕ್ರಮದ ವಿಶೇಷತೆ ಆಗಿತ್ತು.

ಪಟ್ಟಣದ ಸರ್ಕಾರಿ ಪ್ರಾಥಮಿಕ ಶಾಲೆ ನಂ.1ರ ಆವರಣದಲ್ಲಿ ಸೋಮವಾರ ನಡೆದ 60ನೇ ವರ್ಷದ ಅಸ್ತಮಾ ಯಜ್ಞ ಕಾರ್ಯಕ್ರಮದ ಸಾನಿಧ್ಯ ವಹಿಸಿದ್ದ ಕುಂದಗೋಳದ ಶ್ರೀ ಬಸವಣ್ಣಜ್ಜನವರು, ದಿವಂಗತ ವೈದ್ಯ ಬಾಬುರಾವ್ ಕುಲಕರ್ಣಿ ಅವರ ಸೇವಾ ಮನೋಭಾವವನ್ನು ಕೊಂಡಾಡಿದರು.

ಆಯುರ್ವೇದ ಔಷಧಿ ಪುರಾತನ ಕಾಲದಿಂದಲೂ ಜನಜೀವನದ ಭಾಗವಾಗಿದ್ದು, ಗಿಡಮೂಲಿಕೆಗಳಿಂದ ನೀಡುವ ಚಿಕಿತ್ಸೆ ಮೂಲಕ ಸಾವಿರಾರು ಜನರು ಗುಣಮುಖರಾಗಿದ್ದಾರೆ. ಇಂತಹ ಔಷಧಿಯ ಮೂಲಕ ಲಕ್ಷ್ಮೇಶ್ವರ ಪಟ್ಟಣದ ಕೀರ್ತಿಯನ್ನು ರಾಜ್ಯಾದ್ಯಂತ ಹರಡಿಸಿದ ದಿ. ವೈದ್ಯ ಬಾಬುರಾವ್ ಕುಲಕರ್ಣಿ ಅವರ ಸೇವೆ ಸದಾ ಸ್ಮರಣೀಯ ಎಂದು



ಅವರು ಹೇಳಿದರು.

ಯಾವುದೇ ಫಲಾಪೇಕ್ಷೆಯಿಲ್ಲದೆ 60 ವರ್ಷಗಳಿಂದ ಅಸ್ತಮಾ ರೋಗಿಗಳಿಗೆ ಉಚಿತ ಔಷಧಿ ವಿತರಿಸುತ್ತಿರುವುದು ಈ ಭಾಗದ ಹೆಮ್ಮೆಯ ಸಂಗತಿ. ಕಾರ್ಯಕ್ರಮಕ್ಕೆ ಹರಿದು ಬಂದಿರುವ ಜನಸ್ತೋಮವೇ ಈ ಔಷಧಿಯ ಮೇಲಿನ ನಂಬಿಕೆ ಮತ್ತು ಮಹತ್ವವನ್ನು ತೋರಿಸುತ್ತದೆ ಎಂದು ಶ್ರೀಗಳು ಅಭಿಪ್ರಾಯಪಟ್ಟರು.

ಪಿಎಸ್‌ಐ ನಾಗರಾಜ ಗಡದ ಮಾತನಾಡಿ, ಮೃಗಶಿರಾ ಮಳೆಯ ನಕ್ಷತ್ರದ ಸಂದರ್ಭದಲ್ಲಿ ನೀಡಲಾಗುವ ಈ ಔಷಧಿಯಿಂದ ಲಕ್ಷಾಂತರ ಜನರು ಪರಿಹಾರ ಕಂಡುಕೊಂಡಿದ್ದಾರೆ ಎಂದರು.

ಮೃಗಶಿರಾ ನಕ್ಷತ್ರದ ಸಂದರ್ಭದಲ್ಲಿ ವಾತಾವರಣದಲ್ಲಿ ಉಂಟಾಗುವ ಬದಲಾವಣೆ ಹಾಗೂ ಆಯುರ್ವೇದ ಔಷಧಿಯ ಗುಣಗಳಿಂದ ಈ ಚಿಕಿತ್ಸೆಗೆ ವಿಶೇಷ ಮಹತ್ವ ಬಂದಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಸರ್ಪಭೂಷಣ ಮಹಾಸ್ವಾಮಿಗಳು, ಅಮೋಘಿಮಠದ ಶ್ರೀಗಳು ಉಪಸ್ಥಿತರಿದ್ದರು. ಹುಬ್ಬಳ್ಳಿ ಆಯುರ್ವೇದಿಕ ಕಾಲೇಜಿನ ಪ್ರಾಚಾರ್ಯ ಡಾ. ಬಿ.ಬಿ. ಜೋಶಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹಿರಿಯರಾದ ಪಲ್ಲಣ್ಣನವರು ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು.

ಸಭೆಯಲ್ಲಿ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಡಾ. ಹರೀಶ ಕುಲಕರ್ಣಿ, ವ್ಹಿ.ಜಿ. ಪಡಗೇರಿ, ನಿಂಗಪ್ಪ ಬನ್ನಿ, ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಗೋಪಾಲ ಪಡ್ನೇಸ್, ನಿಂಗಪ್ಪ ತಹಸೀಲ್ದಾರ, ಅನಿಲ ಕುಲಕರ್ಣಿ, ಎಂ.ಆರ್. ಪಾಟೀಲ, ಡಾ. ಮಂಗಸೂಳಿ, ಶಂಕ್ರಪ್ಪ ತಹಸೀಲ್ದಾರ ಹಾಗೂ ಮಂತ್ರಾಲಯ ಪಾದಯಾತ್ರಾ ಸಂಘದ ಸದಸ್ಯರು ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕೃಷ್ಣ ಕುಲಕರ್ಣಿ ಕಾರ್ಯಕ್ರಮ ನಿರೂಪಿಸಿದರು. ಡಿ.ಎಂ. ಪೂಜಾರ ವಂದಿಸಿದರು.

> "ಸಮಾಜ ಸೇವೆಯ ಮನೋಭಾವ ಎಲ್ಲರಲ್ಲೂ ಬರೋದಿಲ್ಲ. ದಿ. ವೈದ್ಯ ಬಾಬುರಾವ್ ಕುಲಕರ್ಣಿ ಅವರು 60 ವರ್ಷಗಳಿಂದ ಯಾವುದೇ ಫಲಾಪೇಕ್ಷೆಯಿಲ್ಲದೆ ಅಸ್ತಮಾ ರೋಗಿಗಳಿಗೆ ಔಷಧಿ ನೀಡುತ್ತಿರುವುದು ನಿಜಕ್ಕೂ ಮಾದರಿಯ ಸೇವೆ"
>
> – ಕುಂದಗೋಳದ ಶ್ರೀ ಬಸವಣ್ಣಜ್ಜನವರು

> "ಮೃಗಶಿರಾ ನಕ್ಷತ್ರದಲ್ಲಿ ನೀಡುವ ಈ ಔಷಧಿಯಿಂದ ಲಕ್ಷಾಂತರ ಜನರು ಗುಣಮುಖರಾಗಿದ್ದಾರೆ. ಇಲ್ಲಿನ ಜನಸ್ತೋಮವೇ ಅದರ ಮಹತ್ವಕ್ಕೆ ಸಾಕ್ಷಿ"
>
> **– ಪಿಎಸ್‌ಐ ನಾಗರಾಜ ಗಡದ**

**'ವೃಕ್ಷೋ ರಕ್ಷತಿ ರಕ್ಷಿತಃ' ಸಂದೇಶದೊಂದಿಗೆ ಪರಿಸರ ಜಾಗೃತಿ ಮೂಡಿಸಿದ ದಿಂಗಾಲೇಶ್ವರ ಶ್ರೀ**

# ಪ್ರಕೃತಿ ಉಳಿದರೆ ಮಾತ್ರ ಜೀವ ಉಳಿವು!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

"ಅಂದು 'ಧರ್ಮೋ ರಕ್ಷತಿ ರಕ್ಷಿತಃ' ಎಂದು ಹೇಳುತ್ತಿದ್ದರು. ಇಂದು 'ವೃಕ್ಷೋ ರಕ್ಷತಿ ರಕ್ಷಿತಃ' ಎನ್ನುವ ಕಾಲ ಬಂದಿದೆ. ನೆಲ, ಜಲ ಹಾಗೂ ಅರಣ್ಯ ಸಂಪತ್ತನ್ನು ಕಾಪಾಡಿ ಬೆಳೆಸದಿದ್ದರೆ ಭವಿಷ್ಯದಲ್ಲಿ ಜೀವ ಸಂಕುಲವೇ ಸಂಕಷ್ಟ ಎದುರಿಸಬೇಕಾಗುತ್ತದೆ" ಎಂದು ಬಾಲೆಹೊಸೂರಿನ ಶ್ರೀ ಫಕ್ಕೀರ ದಿಂಗಾಲೇಶ್ವರ ಜಗದ್ಗುರುಗಳು ಹೇಳಿದರು.



ಬಾಲೆಹೊಸೂರಿನ ಶ್ರೀ ದಿಂಗಾಲೇಶ್ವರ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಹುಬ್ಬಳ್ಳಿಯ ಮಾತೃಪ್ರಭಾ ಸಮಾಜ ಸೇವಾ ಟ್ರಸ್ಟ್ ವತಿಯಿಂದ ಶನಿವಾರ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದ ಸಾನಿಧ್ಯವಹಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ದಶೆಯಲ್ಲಿಯೇ ಪರಿಸರ ಸಂರಕ್ಷಣೆಯ ಬಗ್ಗೆ ಕಾಳಜಿ ಬೆಳೆಸಿಕೊಳ್ಳಬೇಕು. "ಮನೆಗೊಂದು ಮರ, ಊರೊಂದು ವನ" ಎಂಬ ಸಂಕಲ್ಪದೊಂದಿಗೆ ಪ್ರತಿಯೊಬ್ಬರೂ ಪರಿಸರ ಉಳಿಸುವ ಕಾರ್ಯದಲ್ಲಿ ತೊಡಗಬೇಕು ಎಂದು ಶ್ರೀಗಳು ಕರೆ ನೀಡಿದರು.

> "ಪ್ರಕೃತಿ ಮನುಷ್ಯನಿಗೆ ಎಲ್ಲವನ್ನೂ ಕೊಟ್ಟಿದೆ. ಪ್ರಕೃತಿ ಇಲ್ಲದೇ ಜೀವಸಂಕುಲವೇ ಇಲ್ಲ. ವಿದ್ಯಾರ್ಥಿಗಳು ಗಿಡಗಳನ್ನು ಸ್ನೇಹಿತರಂತೆ ಪೋಷಿಸಬೇಕು"
>
> **– ಶ್ರೀ ಫಕ್ಕೀರ ದಿಂಗಾಲೇಶ್ವರ ಜಗದ್ಗುರು**

ಕಾರ್ಯಕ್ರಮ ಉದ್ಘಾಟಿಸಿದ ಮಾತೃಪ್ರಭಾ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷೆ ಪ್ರಭಾವತಿ ಮಾತನಾಡಿ, ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಮರಗಳನ್ನು ನೆಟ್ಟು ಬೆಳೆಸುವ ಮೂಲಕ ಪ್ರಕೃತಿಯನ್ನು ಉಳಿಸಬೇಕಿದೆ ಎಂದರು.

ಶಾಲೆಯ ಮುಖ್ಯ ಶಿಕ್ಷಕ ರೇಣಕಸ್ವಾಮಿ ವೆಂಕಟಾಪುರಮಠ ಅಧ್ಯಕ್ಷತೆವಹಿಸಿ ಪರಿಸರ ಜಾಗೃತಿ ಕುರಿತು ಮಾತನಾಡಿದರು. ಕುಮಾರ ಶ್ರೀತೇಜ ಪರಿಸರ ಸಂರಕ್ಷಣೆಯ ಮಹತ್ವದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ ಸಿಹಿ ವಿತರಣೆ ಮಾಡಲಾಗಿದ್ದು, ಪರಿಸರ ಜಾಗೃತಿ ಮೂಡಿಸುವ ವಿವಿಧ ಚಟುವಟಿಕೆಗಳು ಹಾಗೂ ಸಸಿ ನೆಡುವ ಕಾರ್ಯಕ್ರಮ ನಡೆಯಿತು.

ಶಿಕ್ಷಕಿಯರಾದ ಕವಿತಾ ಅಂಗಡಿ, ವೀಣಾ ಪಾಟೀಲ ಹಾಗೂ ತೇಜಸ್ವಿನಿ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು.

**ದೀನದಲಿತರು, ಮಹಿಳೆಯರ ಹಕ್ಕಿಗಾಗಿ ಬದುಕು ಸಮರ್ಪಿಸಿದ ಮಹಾತಾಯಿ: ರಾಜೇಶ್ವರಿ ಬಡ್ನಿ**

# ಸಮ ಸಮಾಜಕ್ಕಾಗಿ ಸಿಂಹಾಸನವೇ ತೊರೆದ ಬೊಂತಾದೇವಿ!

**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

12ನೇ ಶತಮಾನದಲ್ಲಿ ಆಗಿ ಹೋದ ಶಿವಶರಣೆಯರಲ್ಲಿ ಬೊಂತಾದೇವಿ ಪ್ರಮುಖರಾಗಿದ್ದು, ಸಮ ಸಮಾಜ ನಿರ್ಮಾಣಕ್ಕಾಗಿ ರಾಜ್ಯವನ್ನೇ ತೊರೆದು ದೀನದಲಿತರ, ಮಹಿಳೆಯರು ಹಾಗೂ ಬಡವರ ಸೇವೆಗೆ ತಮ್ಮ ಬದುಕನ್ನು ಸಮರ್ಪಿಸಿಕೊಂಡ ಮಹಾನ್ ಶರಣೆಯಾಗಿದ್ದಾರೆ ಎಂದು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷೆ ರಾಜೇಶ್ವರಿ ಬಡ್ನಿ ಹೇಳಿದರು.



ಪಟ್ಟಣದ ಎಸ್.ಸಿ. ಬಡ್ನಿ ಅವರ ಮನೆಯಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆ ವತಿಯಿಂದ ಆಯೋಜಿಸಿದ್ದ "ಮನೆಮನದಲ್ಲಿ ಶರಣ ಸಂಸ್ಕೃತಿ" ಕಾರ್ಯಕ್ರಮ ಹಾಗೂ ಅಧಿಕ ಮಾಸದ ಅಂಗವಾಗಿ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮದಲ್ಲಿ ಶಿವಶರಣೆ ಬೊಂತಾದೇವಿ ಅವರ ವಚನ ನಿರ್ವಚನ ಮಾಡಿ ಅವರು ಮಾತನಾಡಿದರು.

> "ಬೊಂತಾದೇವಿ ಮಹಿಳೆಯರ ಸ್ವಾತಂತ್ರ್ಯ, ದೀನದಲಿತರ ಹಕ್ಕು ಹಾಗೂ ಸಮ ಸಮಾಜ ನಿರ್ಮಾಣಕ್ಕಾಗಿ ತಮ್ಮ ಜೀವನವನ್ನೇ ಅರ್ಪಿಸಿಕೊಂಡ ಮಹಾತಾಯಿ"
>
> **– ರಾಜೇಶ್ವರಿ ಬಡ್ನಿ**

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗೌರಮ್ಮಾ ಬಡ್ನಿ ವಹಿಸಿದ್ದರು. ಎಸ್.ಸಿ. ಬಡ್ನಿ, ಮಂಜುನಾಥ ಮಟ್ಟಿ, ಶೋಭಾ ಪಾಟೀಲ, ಪ್ರೇಮಾ ಬಡ್ನಿ, ಸುಮನ ಚವಡಿ, ಈರಣ್ಣ ದೊಟಿಕಲ್, ಮಹಾಂತೇಶ ನಪೂರಿಮಠ, ಶಿವಾನಂದ ಆಪ್ತಗೇರಿ ಸೇರಿದಂತೆ ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಯ ಸದಸ್ಯರು ಉಪಸ್ಥಿತರಿದ್ದರು.

**ಲಕ್ಕುಂಡಿಯಲ್ಲಿ ವರುಣನ ಕೃಪೆಗೆ ಪ್ರಾರ್ಥನೆ–ದುರ್ಗಾದೇವಿ ಕೆರೆ ದಂಡೆಯಲ್ಲಿ ವಿಶೇಷ ಪೂಜೆ**

# ಮಳೆಗಾಗಿ ರೈತರ ವಿಶೇಷ ಪೂಜೆ



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮುಂಗಾರು ವಿಳಂಬದಿಂದ ಆತಂಕಗೊಂಡಿರುವ ರೈತರು ಗ್ರಾಮದ ದುರ್ಗಾದೇವಿ ದೇವಸ್ಥಾನದಲ್ಲಿ ವರುಣ ದೇವರ ಕೃಪೆಗೆ ವಿಶೇಷ ಪೂಜೆ ಸಲ್ಲಿಸಿ ಮಳೆಗಾಗಿ ಪ್ರಾರ್ಥಿಸಿದರು.

ಗ್ರಾಮದ ದಂಡಿನ ದುರ್ಗಾದೇವಿ ದೇವಸ್ಥಾನದಲ್ಲಿ ದೇವಿಗೆ ವಿಶೇಷ ಅಭಿಷೇಕ ಮತ್ತು ಪೂಜೆ ನೆರವೇರಿಸಲಾಯಿತು. ಬಳಿಕ ಗ್ರಾಮದ ವಿವಿಧ ದೇವಸ್ಥಾನಗಳಲ್ಲಿ ದೇವರಿಗೆ ಉಡಿ ತುಂಬುವ ಕಾರ್ಯಕ್ರಮ ನಡೆಯಿತು.

ದುರ್ಗಾದೇವಿ ಕೆರೆಯ ದಂಡೆಯಲ್ಲಿ ಮಣ್ಣಿನಿಂದ ಈಶ್ವರ ಲಿಂಗ ಹಾಗೂ ಬಸವಣ್ಣನ ಮೂರ್ತಿ ನಿರ್ಮಿಸಿ ಮಹಿಳೆಯರು ವಿಶೇಷ ಪೂಜೆ ಸಲ್ಲಿಸಿದರು. ಷಡಕ್ಷರಯ್ಯ ಬದ್ದಿಮಠ ಅವರು ಮಂತ್ರಘೋಷಗಳೊಂದಿಗೆ ಪೂಜಾ ವಿಧಿವಿಧಾನ ನಡೆಸಿಕೊಟ್ಟರು.

ಮುಂಗಾರು ಆರಂಭವಾಗಿ ಒಂದು ತಿಂಗಳು ಕಳೆದರೂ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ರೈತರು ಹಾಗೂ ಗ್ರಾಮಸ್ಥರು ಭಕ್ತಿಭಾವದಿಂದ ಪೂಜೆಯಲ್ಲಿ ಭಾಗವಹಿಸಿ ವರುಣ ದೇವರಲ್ಲಿ ಮಳೆಗಾಗಿ ಪ್ರಾರ್ಥಿಸಿದರು. ದೇವಸ್ಥಾನದ ಆವರಣದಲ್ಲಿ ಅನ್ನಸಂತರ್ಪಣೆ ಕಾರ್ಯಕ್ರಮವೂ ನಡೆಯಿತು.

ಇದಕ್ಕೂ ಮೊದಲು ಗ್ರಾಮ ಪಂಚಾಯಿತಿ ಧ್ವನಿವರ್ಧಕದ ಮೂಲಕ ಗ್ರಾಮಸ್ಥರಿಗೆ ವಿಶೇಷ ಪೂಜೆಯಲ್ಲಿ ಭಾಗವಹಿಸುವಂತೆ ಮನವಿ ಮಾಡಿತ್ತು.

ಗ್ರಾಮದ ಸುತ್ತಮುತ್ತಲಿನ ಹಲವೆಡೆ ಮಳೆ ಸುರಿದು ಬಿತ್ತನೆ ಕಾರ್ಯ ಆರಂಭವಾಗಿದ್ದರೂ, ಲಕ್ಕುಂಡಿಯಲ್ಲಿ ಇನ್ನೂ ಮಳೆಯಾಗದ ಕಾರಣ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ ಎಂದು ರೈತರಾದ ಪ್ರಭು ಕುಂಬಾರ, ಶಿವಪ್ಪ ಬಿನ್ನಾಳ, ಅಜ್ಜಪ್ಪ ಕವಲೂರು, ಬಸವರಾಜ ಹಣವಾಳ, ಈಶಪ್ಪ ಕುಂಬಾರ ಹಾಗೂ ಬಸಯ್ಯ ನರಗುಂದಮಠ ತಿಳಿಸಿದರು.

**ಟೆಂಡರ್ ಅವಧಿ ಮುಗಿದರೂ ಕ್ರಮವಿಲ್ಲ–ಹೋರಾಟದ ಒತ್ತಡಕ್ಕೆ 7 ಅಂಗಡಿಗಳು ಸೀಜ್**

# ಪುರಸಭೆ ಮಳಿಗೆಗಳಲ್ಲಿ ಅವ್ಯವಹಾರ?

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಹೊಸ ಬಸ್‌ನಿಲ್ದಾಣದ ಹತ್ತಿರದ ಪುರಸಭೆ ವಾಣಿಜ್ಯ ಮಳಿಗೆಗಳನ್ನು ಕೂಡಲೇ ವಶಕ್ಕೆ ಪಡೆದು ಪಾರದರ್ಶಕ ಟೆಂಡರ್ ಪ್ರಕ್ರಿಯೆ ನಡೆಸಬೇಕು. ನಿಯಮ ಮೀರಿ ಮಾಂಸ ಹಾಗೂ ಎಗ್‌ರೈಸ್ ಮಾರಾಟ ನಡೆಸುತ್ತಿರುವ ಅಂಗಡಿಗಳನ್ನು ತೆರವುಗೊಳಿಸಬೇಕು ಎಂದು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿಮಾನಿ ಬಳಗ ಹಾಗೂ ಜಯ ಕರ್ನಾಟಕ ಸಂಘಟನೆಗಳ ಕಾರ್ಯಕರ್ತರು ಮಂಗಳವಾರ ಜಂಟಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾ ಅಧ್ಯಕ್ಷ ಶರಣು ಗೋಡಿ, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ವೇದಿಕೆಯ ಅಧ್ಯಕ್ಷ ಬಸವರಾಜ ಹಿರೇಮನಿ ಹಾಗೂ ಜಯ ಕರ್ನಾಟಕ ಸಂಘಟನೆ ಅಧ್ಯಕ್ಷ ಇಸ್ಮಾಯಿಲ್ ಆಡೂರ, "ಮಳಿಗೆಗಳ ಟೆಂಡರ್ ಅವಧಿ 2023ರಲ್ಲೇ ಮುಗಿದಿದ್ದರೂ ಪುರಸಭೆ ಮರು ಟೆಂಡರ್ ಕರೆಯದೆ ಮಳಿಗೆ ಪಡೆದವರ ತಾಳಕ್ಕೆ ಕುಣಿಯುತ್ತಿದೆ" ಎಂದು ಆರೋಪಿಸಿದರು.

ಒಬ್ಬರೇ ನಾಲ್ಕು ಮಳಿಗೆ ಪಡೆದು ಲಾಭದ ಉದ್ದೇಶದಿಂದ ಬಾಡಿಗೆಗೆ ನೀಡಲಾಗಿದೆ. ಒಟ್ಟು 29 ಮಳಿಗೆಗಳಿದ್ದು, ಬಹುತೇಕರು ನಿಯಮ ಪಾಲಿಸದೇ ಅಂಗಡಿಗಳನ್ನು ನಡೆಸುತ್ತಿದ್ದಾರೆ. ನಿಯಮದ ಪ್ರಕಾರ ವಾಣಿಜ್ಯ ಮಳಿಗೆಗಳಲ್ಲಿ ಮಾಂಸ ಹಾಗೂ ಎಗ್‌ರೈಸ್ ಮಾರಾಟ ನಿಷಿದ್ಧವಾಗಿದ್ದರೂ ಇಲ್ಲಿ ಅದರದ್ದೇ ಅಬ್ಬರ ಹೆಚ್ಚಾಗಿದೆ ಎಂದು ದೂರಿದರು.

"ಮಳಿಗೆ ಸಂಕೀರ್ಣದಲ್ಲಿ ದುರ್ವಾಸನೆ ಆವರಿಸಿದ್ದು, ಮಹಿಳೆಯರು ಹಾಗೂ ಮಕ್ಕಳು ಬರಲು ಸಾಧ್ಯವಾಗುತ್ತಿಲ್ಲ. ಆಹಾರದ ಗುಣಮಟ್ಟ, ಶುದ್ಧ ಕುಡಿಯುವ ನೀರು ಹಾಗೂ ಸ್ವಚ್ಛತೆ ಸಂಪೂರ್ಣ ನಿರ್ಲಕ್ಷ್ಯಗೊಂಡಿದೆ. ಆಹಾರಕ್ಕೆ ಕೃತಕ ಬಣ್ಣ ಹಾಗೂ ಟೇಸ್ಟಿಂಗ್ ಪೌಡರ್‌ಗಳನ್ನು ಅತಿಯಾಗಿ ಬಳಸಲಾಗುತ್ತಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.



ಪುರಸಭೆ ಲಕ್ಷಾಂತರ ರೂಪಾಯಿ ಬಾಡಿಗೆ ಸಂಗ್ರಹಿಸಿದರೂ 15–20 ವರ್ಷಗಳಿಂದ ಮಳಿಗೆಗಳಿಗೆ ಸುಣ್ಣ–ಬಣ್ಣ ಅಥವಾ ದುರಸ್ತಿ ಮಾಡಿಲ್ಲ. ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಆಶ್ರಯದಿಂದಲೇ ನಿಯಮ ಉಲ್ಲಂಘನೆ ನಡೆಯುತ್ತಿದೆ ಎಂದು ಆರೋಪಿಸಿದರು.

ಈ ವೇಳೆ ಪುರಸಭೆ ಮಾಜಿ ಸದಸ್ಯ ಅನೀಲ ಮುಳಗುಂದ ಹಾಗೂ ಕೆಲ ಅಂಗಡಿಕಾರರು ಪುರಸಭೆಯ ಕ್ರಮಕ್ಕೆ ವಿರೋಧ ವ್ಯಕ್ತಪಡಿಸಿದ್ದು, ಕೆಲ ಹೊತ್ತು ಗೊಂದಲದ ವಾತಾವರಣ ನಿರ್ಮಾಣವಾಯಿತು. ಸಿಪಿಐ ಬಿ.ವೈ. ನ್ಯಾಮಗೌಡ್ರ, ಪಿಎಸ್‌ಐ ನಾಗರಾಜ ಗಡದ, ಟಿ.ಕೆ. ರಾಠೋಡ ಹಾಗೂ ಸಿಬ್ಬಂದಿ ಪರಿಸ್ಥಿತಿ ನಿಯಂತ್ರಿಸಿದರು.

**ಹೋರಾಟಗಾರರ ಒತ್ತಡಕ್ಕೆ ಮಣಿದ ಪುರಸಭೆ ಅಧಿಕಾರಿಗಳು**

ದಾಖಲೆ ಮತ್ತು ಮಾನ್ಯತೆ ಇಲ್ಲದೇ ನಿಯಮ ಉಲ್ಲಂಘನೆ ನಡೆಸುತ್ತಿದ್ದ 7 ಅಂಗಡಿಗಳನ್ನು ಖಾಲಿ ಮಾಡಿಸಿ ಸೀಜ್ ಮಾಡಿದರು. ಪಟ್ಟಣದ ಮೂರು ವಾಣಿಜ್ಯ ಸಂಕೀರ್ಣಗಳ ಟೆಂಡರ್ ಪ್ರಕ್ರಿಯೆಯನ್ನು ಜುಲೈ ಒಳಗೆ ಪೂರ್ಣಗೊಳಿಸಲಾಗುವುದು. ನಿಯಮ ಉಲ್ಲಂಘಿಸಿದ ಮಳಿಗೆದಾರರ ವಿರುದ್ಧ ಹಿರಿಯ ಅಧಿಕಾರಿಗಳಿಗೆ ವರದಿ ಸಲ್ಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು.

ಈ ವೇಳೆ ನಾಗೇಶ ಅಮರಾಪುರ, ಸುರೇಶ ಹಟ್ಟಿ, ಮಂಜುನಾಥ ಮುಳಗುಂದ, ರಮೇಶ ಹಂಗನಕಟ್ಟಿ, ಮಾಂತೇಶ ಗುದ್ನಾಳ, ಇಲಿಯಾಸ್ ಮೀರಾನವರ, ಲೋಕೇಶ ಶರಸೂರಿ, ಮೈಲಾರಿ ಹೆಗ್ಗಣ್ಣವರ, ಎನ್.ಎಂ. ಆಡೂರ, ಎಂ.ಕೆ. ಕುಡಚಿ, ಮಹೇಶ ಸೂರಣಗಿ, ವೀರಭದ್ರಯ್ಯ ಮಠಪತಿ, ಪ್ರವೀಣ ಆಚಾರಿ, ನಿಂಗಪ್ಪ ಕುರಟ್ಟಿ, ಇಸಾಕಬಾಷಾ ಹರಪನಹಳ್ಳಿ, ಬಸಣ್ಣ ಮೇಲೇರಿ, ಮೈನು ಮೊಮಿನ್, ಹಾಲಪ್ಪ ಭಂಡಾರಿ, ನಜೀರ ಬಾಗಲಕೋಟ, ಗೌಸ ಜಮಖಂಡಿ, ಬರಕತಲಿ ಮುಳಗುಂದ, ದುದ್ದು ರತನಖಾನ್, ಯಲ್ಲಪ್ಪ ಹಂಜಗಿ, ರಾಜು ಕೆರೆಕೊಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.

ಪುರಸಭೆ ಅಧಿಕಾರಿಗಳಾದ ಮಂಜುಳಾ ಹೂಗಾರ, ಮಂಜುನಾಥ ಮುದಗಲ್, ಸುರೇಶ ಪೂಜಾರ ಹಾಗೂ ಹನಮಂತಪ್ಪ ನಂದೆಣ್ಣವರ ಉಪಸ್ಥಿತರಿದ್ದರು.

> "ಪುರಸಭೆ ಮಳಿಗೆಗಳಲ್ಲಿ ನಡೆಯುತ್ತಿರುವ ನಿಯಮ ಉಲ್ಲಂಘನೆ ವಿರುದ್ಧ ಹೋರಾಟ ಮುಂದುವರಿಯಲಿದೆ. ಪಾರದರ್ಶಕ ಟೆಂಡರ್ ಪ್ರಕ್ರಿಯೆ ನಡೆಸಲೇಬೇಕು."
> – **ಶರಣು ಗೋಡಿ**



**ಉಚಿತ ರಕ್ತ ಗುಂಪು ತಪಾಸಣಾ ಶಿಬಿರ; 60ಕ್ಕೂ ಹೆಚ್ಚು ಮಂದಿಗೆ ಕಾರ್ಡ್ ವಿತರಣೆ**

# ರಕ್ತದ ಗುಂಪು ತಿಳಿದುಕೊಳ್ಳಿ, ಜೀವ ಉಳಿಸಲು ರಕ್ತದಾನ ಮಾಡಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಭಾವಸಾರ ವ್ಹಿಜನ್ ಇಂಡಿಯಾ ಗದಗ ಘಟಕ ಹಾಗೂ ಸಚ್ಚಿದಾನಂದ ಪರಮಾರ್ಥ ಟ್ರಸ್ಟ್ ಸಹಯೋಗದಲ್ಲಿ ನಗರದ ರಾಜೀವ ಗಾಂಧಿ ನಗರದಲ್ಲಿರುವ ನವಲೆ ಅವರ ಕಟ್ಟಡದಲ್ಲಿ ಶನಿವಾರ ಉಚಿತ ರಕ್ತ ಗುಂಪು ತಪಾಸಣಾ ಶಿಬಿರ ಆಯೋಜಿಸಲಾಯಿತು.

ಶಿಬಿರದಲ್ಲಿ ಸುಮಾರು 60ಕ್ಕೂ ಹೆಚ್ಚು ಜನರಿಗೆ ರಕ್ತ ಗುಂಪಿನ ತಪಾಸಣೆ ನಡೆಸಿ, ರಕ್ತ ಗುಂಪಿನ ಗುರುತಿನ ಕಾರ್ಡ್‌ಗಳನ್ನು ವಿತರಿಸಲಾಯಿತು.

ರಕ್ತ ತಪಾಸಣಾಧಿಕಾರಿ ಡಾ. ದತ್ತಾತ್ರೇಯ ವೈಕುಂಠೆ ಮಾತನಾಡಿ, ಪ್ರತಿಯೊಬ್ಬರೂ ತಮ್ಮ ರಕ್ತದ ಗುಂಪು ಯಾವುದು ಎಂಬುದನ್ನು ತಿಳಿದಿರಬೇಕು. ತುರ್ತು ಪರಿಸ್ಥಿತಿಯಲ್ಲಿ ಇದು ಜೀವ ರಕ್ಷಕವಾಗುತ್ತದೆ. ಜೊತೆಗೆ ಪ್ರತಿಯೊಬ್ಬರೂ ಕನಿಷ್ಠ ವರ್ಷಕ್ಕೊಮ್ಮೆ ರಕ್ತದಾನ ಮಾಡುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.




ಕಾರ್ಯಕ್ರಮದ ಅಧ್ಯಕ್ಷತೆಯನ್ನು ಭಾವಸಾರ ವ್ಹಿಜನ್ ಇಂಡಿಯಾ ಗದಗ ಘಟಕದ ಅಧ್ಯಕ್ಷ ಶ್ರೀಪಾದ ವೈಕುಂಠೆ ವಹಿಸಿ ಮಾತನಾಡಿದರು. ಹಿರಿಯರಾದ ಪರಶುರಾಮ ನವಲೆ ಆತಿಥ್ಯ ವಹಿಸಿದ್ದರು. ವೇದಿಕೆಯಲ್ಲಿ ರಾಜೇಂದ್ರ ತ್ರಿಮಲ್ಲೆ, ಸಚ್ಚಿದಾನಂದ ಪರಮಾರ್ಥ ಟ್ರಸ್ಟ್‌ನ ರತ್ನಾ ಸಂಕಣ್ಣವರ, ಜಯಶ್ರೀ ಹೆಬಸೂರ, ವಿಜಯಲಕ್ಷ್ಮೀ ದೇಸಾಯಿ ಹಾಗೂ ವಿಜಯಾ ನವಲೆ ಉಪಸ್ಥಿತರಿದ್ದರು.

ಶಿಬಿರದ ಯಶಸ್ಸಿಗೆ ಎಚ್. ಆರ್. ರಾಂಪೂರ, ರಾಘವೇಂದ್ರ ನವಲೆ, ಲಕ್ಷ್ಮೀ ಪಸಲಾದಿ, ಸುರೇಖಾ ಪಾಟೀಲ ಹಾಗೂ ಭಾಗ್ಯಶ್ರೀ ನವಲೆ ಶ್ರಮಿಸಿದರು.

ಶಿಬಿರದಲ್ಲಿ ಶಾಲಾ–ಕಾಲೇಜು ವಿದ್ಯಾರ್ಥಿಗಳು, ರಾಜೀವ ಗಾಂಧಿ ನಗರದ ಗಣ್ಯರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

# ಸಸ್ಯಕಾಶಿ ನಿರ್ಮಾಣಕ್ಕೆ ನರೇಗಲ್ಲ ಪೊಲೀಸರ ಹೆಜ್ಜೆ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ಐಶ್ವರ್ಯ ನಾಗರಾಳ ಅವರ ನೇತೃತ್ವದಲ್ಲಿ ಸಿಬ್ಬಂದಿಯವರು ಸಸಿ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಆಚರಿಸಿದರು.

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಪಿಎಸ್‌ಐ ಐಶ್ವರ್ಯ ನಾಗರಾಳ, ಸಾರ್ವಜನಿಕ ಸೇವೆಯಲ್ಲಿ ದಿನದ 24 ಗಂಟೆಯೂ ತೊಡಗಿರುವ ಪೊಲೀಸ್ ಸಿಬ್ಬಂದಿಗೆ ಉತ್ತಮ ಆರೋಗ್ಯ ಅತ್ಯಗತ್ಯ. ಶುದ್ಧ ಗಾಳಿ ಮತ್ತು ಆಮ್ಲಜನಕಕ್ಕಾಗಿ ಪರಿಸರ ಸಂರಕ್ಷಣೆ ಅವಶ್ಯವಾಗಿದ್ದು, ಠಾಣಾ ಆವರಣದಲ್ಲಿ ಸಸ್ಯಕಾಶಿ ನಿರ್ಮಾಣಕ್ಕೆ ಮುಂದಾಗಿದ್ದೇವೆ ಎಂದು ಹೇಳಿದರು.



ನಮ್ಮ ಆರೋಗ್ಯ ಚೆನ್ನಾಗಿರಬೇಕೆಂದರೆ ನಮ್ಮ ಸುತ್ತಲಿನ ಪರಿಸರವೂ ಸ್ವಚ್ಛವಾಗಿರಬೇಕು ಎಂದು ಪಿಎಸ್‌ಐ ಐಶ್ವರ್ಯ ನಾಗರಾಳ ಹೇಳಿದರು.

ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಮಾತನಾಡಿ, ಪೊಲೀಸ್ ಇಲಾಖೆಯವರು ಸಸ್ಯೋದ್ಯಾನ ನಿರ್ಮಾಣಕ್ಕೆ ಮುಂದಾಗಿರುವುದು ಶ್ಲಾಘನೀಯ ಕಾರ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಎಎಸ್‌ಐ ಎಂ.ಆರ್. ಬಾರಕೇರ, ಆರ್. ಎಸ್. ಕಪ್ಪತ್ತನವರ, ಪಿ.ಕೆ. ದಾಸರ, ವಿ.ಎಸ್. ಗೋದಿಗನೂರ, ಬಿ.ಎಸ್. ಮಾಯಮ್ಮನವರ, ಯು.ಎಂ. ಬಂಗಾರಿ, ಮಂಜುನಾಥ ಮಾದರ, ರೋಷನ್ ಜಮೀರ, ಶಾಂತಕುಮಾರ ವಡ್ಡರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಪುಟಾಣಿಗಳಿಗೆ ಅಕ್ಷರಾಭ್ಯಾಸ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ ಮಂಗಳವಾರ ವಿದ್ಯಾದೇವತೆ ಸರಸ್ವತಿ, ಗಣಪತಿ ಹಾಗೂ ಮಹಾಲಕ್ಷ್ಮಿ ದೇವಿಯ ಪೂಜೆ ಮತ್ತು ಅಕ್ಷರಾಭ್ಯಾಸ ಕಾರ್ಯಕ್ರಮವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು.



ಮುಖ್ಯ ಶಿಕ್ಷಕಿ ಸ್ವಾತಿ ಪೈ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಕ್ಕಳಿಗೆ ಪೂಜಾ ವಿಧಿವಿಧಾನಗಳೊಂದಿಗೆ ಅಕ್ಷರಾಭ್ಯಾಸ ಮಾಡಿಸಲಾಯಿತು. ಇದೇ ವೇಳೆ ವಿದ್ಯೆಯ ಮಹತ್ವ, ವಿನಯ, ಸಂಸ್ಕಾರ, ಶಿಸ್ತು ಹಾಗೂ ಭಾರತೀಯ ಪರಂಪರೆಯ ಕುರಿತು ಮಕ್ಕಳಿಗೆ ಅರಿವು ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಪಾಲಕರು, ಶಿಕ್ಷಕರು ಹಾಗೂ ಬಳಗದ ಪದಾಧಿಕಾರಿಗಳು ಭಾಗವಹಿಸಿ ಮಕ್ಕಳಿಗೆ ಶುಭ ಹಾರೈಸಿದರು.

**ಗದಗನಲ್ಲಿ 'ಖೇತ್ ಬಚಾವೋ ಅಭಿಯಾನ'ಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಚಾಲನೆ**

# ಮಣ್ಣಿನ ಆರೋಗ್ಯ ಕಾಪಾಡಿದರೆ ಕೃಷಿ ಉಳಿಯುತ್ತದೆ

■ **ವಿಜಯಸಾಕ್ಷಿ ಸುದ್ದಿ, ಗದಗ**

ರೈತರ ಕೃಷಿ ಭೂಮಿಯ ಸಂರಕ್ಷಣೆ, ಮಣ್ಣಿನ ಫಲವತ್ತತೆ ಕಾಪಾಡುವಿಕೆ ಹಾಗೂ ಸುಸ್ಥಿರ ಕೃಷಿ ಪದ್ಧತಿಗಳ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ ಭಾರತ ಸರ್ಕಾರ, ಕರ್ನಾಟಕ ಸರ್ಕಾರ, ಜಿಲ್ಲಾ ಪಂಚಾಯತ್ ಹಾಗೂ ಕೃಷಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡಿರುವ 'ಖೇತ್ ಬಚಾವೋ ಅಭಿಯಾನ'ಕ್ಕೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅವರು ಮಂಗಳವಾರ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿದರು.

ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿದ ಬಸವರಾಜ ಬೊಮ್ಮಾಯಿ, ಕೃಷಿ ದೇಶದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ಕೃಷಿ ಭೂಮಿಯ ಸಂರಕ್ಷಣೆ ಹಾಗೂ ಮಣ್ಣಿನ ಆರೋಗ್ಯ ಕಾಪಾಡುವುದು ಇಂದಿನ ಅಗತ್ಯವಾಗಿದೆ ಎಂದು ಹೇಳಿದರು.

ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು.




ಮಣ್ಣಿನ ಪರೀಕ್ಷೆ, ನೀರಿನ ಸಮರ್ಪಕ ಬಳಕೆ ಹಾಗೂ ಸಾವಯವ ಮತ್ತು ನೈಸರ್ಗಿಕ ಕೃಷಿಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

'ಖೇತ್ ಬಚಾವೋ ಅಭಿಯಾನ'ದ ಮೂಲಕ ರೈತರಿಗೆ ಮಣ್ಣಿನ ಸವಕಳಿ ತಡೆ, ಬೆಳೆ ವೈವಿಧ್ಯತೆ, ನೀರಿನ ಸಂರಕ್ಷಣೆ ಹಾಗೂ ಪರಿಸರ ಸ್ನೇಹಿ ಕೃಷಿ ಪದ್ಧತಿಗಳ ಕುರಿತು ಜಾಗೃತಿ ಮೂಡಿಸಲಾಗುವುದು. ಇದರಿಂದ ಕೃಷಿ ಉತ್ಪಾದಕತೆ ಹೆಚ್ಚಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಕೃಷಿ ಇಲಾಖೆ ಹಾಗೂ ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಅಭಿಯಾನವನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಬೇಕು. ರೈತ ಸಮುದಾಯವೂ ಸಕ್ರಿಯವಾಗಿ ಪಾಲ್ಗೊಂಡು ಇದರ ಉದ್ದೇಶವನ್ನು ಸಾಕಾರಗೊಳಿಸಬೇಕು ಎಂದು ಕರೆ ನೀಡಿದರು.


ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ, ಕೃಷಿ ಸಹಾಯಕ ನಿರ್ದೇಶಕ ಮಲ್ಲಯ್ಯ ಕೆ., ಜಿಲ್ಲಾ ಪಂಚಾಯತ್ ಅಧಿಕಾರಿಗಳಾದ ಎಂ.ವಿ. ಚಳಗೇರಿ, ಎಸ್.ಎಸ್. ಕಲ್ಮನಿ ಸೇರಿದಂತೆ ಕೃಷಿ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ರೈತ ಪ್ರತಿನಿಧಿಗಳು ಉಪಸ್ಥಿತರಿದ್ದರು.

ಅಭಿಯಾನದ ಅಂಗವಾಗಿ ಜಿಲ್ಲೆಯ ವಿವಿಧ ಗ್ರಾಮಗಳಲ್ಲಿ ರೈತರ ಸಭೆಗಳು, ಜಾಗೃತಿ ಕಾರ್ಯಕ್ರಮಗಳು ಹಾಗೂ ಕೃಷಿ ತಂತ್ರಜ್ಞಾನ ಮಾಹಿತಿ ಶಿಬಿರಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

> "ಮಣ್ಣಿನ ಫಲವತ್ತತೆ ಉಳಿದರೆ ಮಾತ್ರ ರೈತರ ಬದುಕು ಮತ್ತು ಕೃಷಿಯ ಭವಿಷ್ಯ ಸುರಕ್ಷಿತವಾಗಿರುತ್ತದೆ."
> – ಬಸವರಾಜ ಬೊಮ್ಮಾಯಿ

## ನಿಧನ ವಾರ್ತೆ

### ವಿಷ್ಣುರಾವ್ ನವಲೆ



ಮುಳಗುಂದ: ಪಟ್ಟಣದ ಚಿಂದಿಪೇಟಿ ಓಣಿ ನಿವಾಸಿ ಹಾಗೂ ನಿವೃತ್ತ ಶಿಕ್ಷಕರಾದ ವಿಷ್ಣುರಾವ್ ಗಣಪತಿ ನವಲೆ (71) ಮಂಗಳವಾರ ನಿಧನರಾದರು.

ಮೃತರು ಇಬ್ಬರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅವರ ನಿಧನಕ್ಕೆ ಬಂಧುಗಳು, ಸ್ನೇಹಿತರು ಹಾಗೂ ಸ್ಥಳೀಯರು ಸಂತಾಪ ವ್ಯಕ್ತಪಡಿಸಿದ್ದಾರೆ.

### ಅನ್ನಪೂರ್ಣ ಜವಳಿಶೆಟ್ಟರ



ಮುಳಗುಂದ, 9. ಪಟ್ಟಣದ ತಿಗಡಿಕೇರಿ ಓಣಿ ನಿವಾಸಿಯಾದ ಅನ್ನಪೂರ್ಣ ವೀರಭದ್ರಪ್ಪ ಜವಳಿಶೆಟ್ಟರ (83) ಮಂಗಳವಾರ ನಿಧನರಾದರು.

ಮೃತರು ಮೂವರು ಪುತ್ರರು, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅವರ ನಿಧನಕ್ಕೆ ಬಂಧುಗಳು ಹಾಗೂ ಸ್ಥಳೀಯರು ಸಂತಾಪ ಸೂಚಿಸಿದ್ದಾರೆ.

**ಲೋಕೋಪಯೋಗಿ ಇಲಾಖೆ**
ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ,
ಲೋಕೋಪಯೋಗಿ ಇಲಾಖೆ, ಉಪ ವಿಭಾಗ, ರೋಣ.
ಇಮೇಲ್ : kpwdron2013@gmail.com

ಸಂಖ್ಯೆ : ಸ.ಕಾ.ನಿ.ಇಂ.ರೋಣ/ಲೋ.ಇ./ಪಿಬಿ–ಕೆ.ಆರ್.ಡಿ.ಸಿ.ಎಲ್./2026–27/210
ದಿನಾಂಕ : 08–06–2026

**ಟೆಂಡರ್ ಪ್ರಕಟಣೆ**

ಕರ್ನಾಟಕ ರಾಜ್ಯಪಾಲರ ಪರವಾಗಿ ಈ ಕೆಳಗೆ ಸಹಿ ಮಾಡಿದ ಅಧಿಕಾರಿಯವರಿಂದ ಲೋಕೋಪಯೋಗಿ ಇಲಾಖೆ ರೋಣ ಉಪ ವಿಭಾಗದಡಿ ಲೆಕ್ಕ ಶೀರ್ಷಿಕೆ : 5054–80–190–0–01–132 ಅನುದಾನದ ಅಡಿಯಲ್ಲಿಯ ಒಟ್ಟು 18.20 ಲಕ್ಷ ಮೊತ್ತದಲ್ಲಿ ಒಟ್ಟು 07 ಕಾಮಗಾರಿಗಳಿಗೆ (ಕನಿಷ್ಟ ಮೊತ್ತ ರೂ. 1.41 ಲಕ್ಷ ಗರಿಷ್ಟ ಮೊತ್ತ ರೂ. 4.39 ಲಕ್ಷ) ಲೋಕೋಪಯೋಗಿ ಇಲಾಖೆಯಲ್ಲಿ ನೊಂದಣಿ ಮಾಡಿಸಿದ ಅರ್ಹ ಗುತ್ತಿಗೆದಾರರಿಂದ ಸ್ಟ್ಯಾಂಡರ್ಡ್ ಬಿಡ್ ಡಾಕ್ಯೂಮೆಂಟ್ ಕೆ.ಸಿ.–7 ಪ್ರಕಾರ ಕನ್ಸ್‌ಲ್‌ಟನ್ಸಿ ಟೆಂಡರ್‌ರನ್ನು, ಕೆಲಸದ ಹೆಸರನ್ನು ನಮೂದಿಸಿ ಮೋಹರು ಬಂದ್ ಮಾಡಿದ ಟೆಂಡರ್‌ನ್ನು ಆಹ್ವಾನಿಸಲಾಗಿದೆ. **ಟೆಂಡರ್‌ನ್ನು ಅನುಸೂಚಿತ ಅವಧಿ ಮತ್ತು ವೇಳೆಯಲ್ಲಿ ಸ್ವೀಕರಿಸಲಾಗುವದು. ಟೆಂಡರ್‌ಗಳನ್ನು ಗುತ್ತಿಗೆದಾರರ ಅಥವಾ ಅವರ ಪ್ರತಿನಿಧಿಗಳ ಹಾಜರಾತಿಯಲ್ಲಿ ನಿಗದಿಪಡಿಸಿದ ದಿನಾಂಕದಂದು ತೆರೆಯಲಾಗುವದು.**

ಮೇಲಿನ ಕಾಮಗಾರಿಗಳಿಗೆ ಅರ್ಜಿ ಸಲ್ಲಿಸುವ ದಿನಾಂಕ : 18–06–2026 ರವರೆಗೆ ಮತ್ತು ಅದಕ್ಕಿಂತ ಮೊದಲು ಕಛೇರಿ ವೇಳೆಯಲ್ಲಿ ಮಾತ್ರ, ಟೆಂಡರ್ ಫಾರಂ ಪೂರೈಸುವ ದಿನಾಂಕ : 19–06–2026 ರಂದು ಕಛೇರಿಯ ಕೆಲಸದ ವೇಳೆಯಲ್ಲಿ ಮಾತ್ರ, ಟೆಂಡರ್ ಸಲ್ಲಿಸುವ ದಿನಾಂಕ : 20–06–2026 ರ ಸಂಜೆ 4.00 ಘಂಟೆಯವರೆಗೆ, ಟೆಂಡರ್ ತೆರೆಯುವ ದಿನಾಂಕ : 20–06–2026 ರ ಸಂಜೆ 4.30 ಘಂಟೆಯ ನಂತರ ಅಥವಾ ಅನುಕೂಲವಾದ ದಿನದಂದು.

GST shall be paid separately as per prevailing Government Order. The increase in GST shall not be paid in the extended period of contract for which the contractor alone is responsible for delay as determined by the authority while granting the extension of time.

ಸಹಿ/– ಸಹಾಯಕ ಕಾರ್ಯಪಾಲಕ ಅಭಿಯಂತರರು,
ಲೋಕೋಪಯೋಗಿ ಇಲಾಖೆ, ಉಪ ವಿಭಾಗ,
ರೋಣ.

ಡಿಐಪಿಆರ್/ಗದಗ/114/ಮಣಿಪಾಲ್/2026–27

**ಸಂಚಾರಿ ನಿಯಮ ಪಾಲಿಸಿ ಜೀವ ಉಳಿಸಿಕೊಳ್ಳಿ: ಸಿಪಿಐ ನ್ಯಾಮಗೌಡ್ರ ಎಚ್ಚರಿಕೆ**

# ಹೆಲ್ಮೆಟ್ ಇಲ್ಲದಿದ್ದರೆ ದಂಡ ಫಿಕ್ಸ್



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಜೀವ ಅತ್ಯಮೂಲ್ಯವಾಗಿದ್ದು, ವಾಹನ ಸವಾರರು ಕಡ್ಡಾಯವಾಗಿ ಸಂಚಾರಿ ನಿಯಮಗಳನ್ನು ಪಾಲಿಸುವ ಮೂಲಕ ತಮ್ಮ ಹಾಗೂ ಇತರರ ಸುರಕ್ಷತೆಗೆ ಆದ್ಯತೆ ನೀಡಬೇಕು ಎಂದು ಸಿಪಿಐ ಬಿ.ವೈ. ನ್ಯಾಮಗೌಡ್ರ ಹೇಳಿದರು.

ಮಂಗಳವಾರ ಪಟ್ಟಣದಲ್ಲಿ ಹೆಲ್ಮೆಟ್ ಧರಿಸದೇ ದ್ವಿಚಕ್ರ ವಾಹನ ಚಾಲನೆ, ಅಗತ್ಯ ದಾಖಲೆಗಳಿಲ್ಲದೇ ವಾಹನ ಸಂಚಾರ, ಅತಿವೇಗ ಹಾಗೂ ಇತರೆ ಸಂಚಾರಿ ನಿಯಮ ಉಲ್ಲಂಘನೆ ಮಾಡುತ್ತಿದ್ದ ವಾಹನ ಸವಾರರನ್ನು ತಡೆದು ಪೊಲೀಸರು ತಿಳುವಳಿಕೆ ನೀಡಿದರು.

ಈ ವೇಳೆ ಮಾತನಾಡಿದ ಸಿಪಿಐ ನ್ಯಾಮಗೌಡ್ರ, ಸಂಚಾರಿ ನಿಯಮ ಪಾಲನೆಯಿಂದ ರಸ್ತೆ ಅಪಘಾತಗಳನ್ನು ಕಡಿಮೆ ಮಾಡಿ ಅಮೂಲ್ಯ ಜೀವಗಳನ್ನು ಉಳಿಸಬಹುದು. ದ್ವಿಚಕ್ರ ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ನಾಲ್ಕು ಚಕ್ರ ವಾಹನ ಚಾಲಕರು ಸೀಟ್ ಬೆಲ್ಟ್ ಬಳಸಬೇಕು ಎಂದು ಹೇಳಿದರು.

ವಾಹನ ಚಾಲನೆಯ ವೇಳೆ ಮೊಬೈಲ್ ಬಳಕೆ ಹಾಗೂ ಅತಿವೇಗದ ಚಾಲನೆಯನ್ನು ತಪ್ಪಿಸಬೇಕು. ಮುಖ್ಯವಾಗಿ ಪಾಲಕರು ಅಪ್ರಾಪ್ತ ಮಕ್ಕಳಿಗೆ ಬೈಕ್ ನೀಡಬಾರದು ಎಂದು ಎಚ್ಚರಿಸಿದರು. ಸಂಚಾರಿ ನಿಯಮ ಉಲ್ಲಂಘನೆ ತಡೆಯಲು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಿಸಿ ಕ್ಯಾಮೆರಾ ಅಳವಡಿಸಲಾಗಿದ್ದು, ಅದರ ಆಧಾರದ ಮೇಲೆಯೇ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಈ ವೇಳೆ ನಿಯಮ ಉಲ್ಲಂಘಿಸಿದ ಅನೇಕರಿಗೆ ಪೊಲೀಸರು ದಂಡ ವಿಧಿಸಿದರು. ಸಿಪಿಐ ನಾಗರಾಜ ಗಡಾದ ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

**ಲಕ್ಕುಂಡಿಯಲ್ಲಿ 35 ಮಿನಿ ಟ್ಯಾಂಕ್ ಸ್ವಚ್ಛತೆ, ಪೈಪ್‌ಲೈನ್ ದುರಸ್ತಿ ಭರದಿಂದ ಆರಂಭ- ವಾರದಲ್ಲಿ ಸಮರ್ಪಕ ನೀರು ಪೂರೈಕೆ ಭರವಸೆ**

# ಗ್ರಾಮ ಸಭೆಯ ಗರಂ ಪ್ರಶ್ನೆಗೆ ಎಚ್ಚೆತ್ತ ಪಂಚಾಯಿತಿ!

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಗ್ರಾಮ ಸಭೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಅಸ್ವಚ್ಛತೆ ಬಗ್ಗೆ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಬೆನ್ನಲ್ಲೇ ಲಕ್ಕುಂಡಿ ಗ್ರಾಮ ಪಂಚಾಯಿತಿ ಎಚ್ಚೆತ್ತುಕೊಂಡಿದ್ದು, ಗ್ರಾಮದಲ್ಲಿ ಮಿನಿ ಟ್ಯಾಂಕ್‌ಗಳ ಸ್ವಚ್ಛತೆ, ಪೈಪ್‌ಲೈನ್ ಹಾಗೂ ಕೊಳವೆಬಾವಿ ದುರಸ್ತಿ ಕಾರ್ಯವನ್ನು ಭರದಿಂದ ಆರಂಭಿಸಿದೆ.

ಕಳೆದ ಜೂನ್ 5ರಂದು ನಡೆದ ಗ್ರಾಮ ಸಭೆಯಲ್ಲಿ, ಪೈಪ್‌ಲೈನ್ ಮತ್ತು ಕೊಳವೆಬಾವಿ ದುರಸ್ತಿ ನಿರ್ಲಕ್ಷ್ಯದಿಂದ ಸಮರ್ಪಕ ನೀರು ಪೂರೈಕೆ ಆಗುತ್ತಿಲ್ಲ. ಗ್ರಾಮದ ಹೊರವಲಯ ಅಸ್ವಚ್ಛತೆಯಿಂದ ಕೂಡಿದೆ ಎಂದು ಗ್ರಾಮಸ್ಥರು ಒತ್ತಾಯಿಸಿದ್ದರು. ಇದರ ಪರಿಣಾಮವಾಗಿ ಗ್ರಾಮ ಪಂಚಾಯಿತಿ ತುರ್ತು ಸಭೆ ನಡೆಸಿ ಕ್ರಮ ಕೈಗೊಂಡಿದೆ.

ಗ್ರಾಮದ ವಾರ್ಡ್, ಶಾಲೆ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನಿರ್ಮಿಸಲಾಗಿರುವ ಒಟ್ಟು 35 ಮಿನಿ ಟ್ಯಾಂಕ್‌ಗಳನ್ನು ಪಂಚಾಯಿತಿ ಸಿಬ್ಬಂದಿಯಿಂದ ಸ್ವಚ್ಛಗೊಳಿಸಿ ಸುಣ್ಣ ಹಚ್ಚುವ ಕಾರ್ಯ ಆರಂಭಿಸಲಾಗಿದೆ. ಜಂತ್ಲಿ-ಶಿರೂರು ರಸ್ತೆಯ ಕೊಳವೆಬಾವಿಯಿಂದ ನೀರು ಪೂರೈಕೆಯಾಗುವ ಪೈಪ್‌ಲೈನ್‌ಗಳ ದುರಸ್ತಿ ಕಾರ್ಯವೂ ಪ್ರಗತಿಯಲ್ಲಿದೆ.



ಕುಡಿಯುವ ನೀರಿನ ಟ್ಯಾಂಕ್‌ಗಳ ಸುತ್ತಮುತ್ತ ಸ್ವಚ್ಛತೆ ಕಾಪಾಡಿ, ಸುಣ್ಣ-ಬಣ್ಣ ಬಳಿದು ಸುಂದರಗೊಳಿಸುತ್ತಿರುವ ಪಂಚಾಯಿತಿ ಕಾರ್ಯಕ್ಕೆ ಗ್ರಾಮಸ್ಥರಿಂದ ಮೆಚ್ಚುಗೆ ವ್ಯಕ್ತವಾಗಿದೆ.

ಗ್ರಾಮದಲ್ಲಿ ಒಟ್ಟು 11 ವಾರ್ಡ್‌ಗಳಿದ್ದು, 1ರಿಂದ 5 ಹಾಗೂ 11ನೇ ವಾರ್ಡ್‌ಗಳಿಗೆ ಈಗಾಗಲೇ 2-3 ದಿನಕ್ಕೊಮ್ಮೆ ನೀರು ಪೂರೈಕೆಯಾಗುತ್ತಿದೆ. ಆದರೆ 6ರಿಂದ 10ನೇ ವಾರ್ಡ್‌ಗಳಿಗೆ 8ರಿಂದ 12 ದಿನಕ್ಕೊಮ್ಮೆ ಮಾತ್ರ ನೀರು ಬರುತ್ತಿರುವುದು ಗ್ರಾಮ ಸಭೆಯಲ್ಲಿ ಬೆಳಕಿಗೆ ಬಂದಿತ್ತು.

ಈ ಕುರಿತು ಮಾತನಾಡಿದ ಆಡಳಿತಾಧಿಕಾರಿ ಶರಣು ಗೋಗೇರಿ, ಹೆಚ್ಚು ಕುಟುಂಬಗಳಿರುವ 6ರಿಂದ 10ನೇ ವಾರ್ಡ್‌ನಲ್ಲಿ 35 ವಾಲ್‌ಗಳಿದ್ದು, ಇಲ್ಲಿ ಇಬ್ಬರು ವಾಲ್‌ಮನ್‌ಗಳನ್ನು ನೇಮಕ ಮಾಡಿ ಅವರಿಗೆ ನಿಗದಿತ ಸಮಯ ವಹಿಸಲಾಗಿದೆ. ಇನ್ನು ಮುಂದೆ ಕನಿಷ್ಠ ನಾಲ್ಕು ದಿನಕ್ಕೊಮ್ಮೆ ನೀರು ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಗ್ರಾಮಕ್ಕೆ ಪ್ರತಿದಿನ ಸುಮಾರು 9 ಲಕ್ಷ ಲೀಟರ್ ನೀರಿನ ಅಗತ್ಯವಿದ್ದು,

> "ಒಂದು ವಾರದೊಳಗೆ ಎಲ್ಲಾ ವಾರ್ಡ್‌ಗಳಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆ ಮಾಡಲು ಕ್ರಮ ಕೈಗೊಳ್ಳಲಾಗಿದೆ. ನಿರ್ಲಕ್ಷ್ಯ ತೋರಿದ ಸಿಬ್ಬಂದಿ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು."
>
> –ಶರಣು ಗೋಗೇರಿ



ಪ್ರಸ್ತುತ ತುಂಗಭದ್ರಾ ನದಿ ಪಾತ್ರದಿಂದ 5 ಲಕ್ಷ ಲೀಟರ್ ನೀರು ಮಾತ್ರ ಲಭ್ಯವಾಗುತ್ತಿದೆ. ಉಳಿದ 4 ಲಕ್ಷ ಲೀಟರ್ ನೀರನ್ನು ಗ್ರಾಮದ ಕೊಳವೆಬಾವಿ ಸಂಪನ್ಮೂಲಗಳಿಂದ ಪೂರೈಸಲು ಪ್ರಯತ್ನಿಸಲಾಗುತ್ತಿದೆ ಎಂದು ಪಿಡಿಒ ಡಾ. ಅಮೀರನಾಯಕ ಮಾಹಿತಿ ನೀಡಿದರು.

ಮಳೆಗಾಲ ಆರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಅನೈರ್ಮಲ್ಯ ತಪ್ಪಿಸಲು ಗ್ರಾಮದ ವಿವಿಧ ಭಾಗಗಳ ಮಿನಿ ಟ್ಯಾಂಕ್‌ಗಳನ್ನು ಸ್ವಚ್ಛಗೊಳಿಸಿ ಪರಿಸರ ಸುಂದರವಾಗಿಡುವ ಅಭಿಯಾನವನ್ನು ಆರಂಭಿಸಲಾಗಿದೆ ಎಂದರು.

**ಇಸ್ಲಾಂ ವಾಸ್ತುಕಲೆ ಕೇವಲ ಕಟ್ಟಡವಲ್ಲ-ಅದು ಸಂಸ್ಕೃತಿ, ವಿಜ್ಞಾನ ಮತ್ತು ಆಧ್ಯಾತ್ಮಿಕತೆಯ ಸಂಗಮ: ಡಾ. ಅಪ್ಪಣ್ಣ ಹಂಜೆ**

# ಮಸೀದಿಗಳ ಕಮಾನುಗಳಲ್ಲಿ ಅಡಗಿದೆ ಇಸ್ಲಾಂ ತತ್ವಜ್ಞಾನ

■ವಿಜಯಸಾಕ್ಷಿ ಸುದ್ದಿ, ಗದಗ

ಇಸ್ಲಾಂ ವಾಸ್ತುಕಲೆ ಕೇವಲ ಕಟ್ಟಡ ನಿರ್ಮಾಣವಲ್ಲ, ಅದು ಧಾರ್ಮಿಕ ನಂಬಿಕೆ, ಆಧ್ಯಾತ್ಮಿಕತೆ, ಅನಂತತೆ ಹಾಗೂ ಸೌಂದರ್ಯದ ಸಂಕೇತವಾಗಿದೆ ಎಂದು ಹುಲಕೋಟಿಯ ಕೆ.ಎಚ್. ಪಾಟೀಲ ಫಸ್ಟ್ ಗ್ರೇಡ್ ಕಾಲೇಜಿನ ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ಅಪ್ಪಣ್ಣ ಹಂಜೆ ಹೇಳಿದರು.

ನಗರದ ಅಬ್ದುಲ್ ಕಲಾಂ ಆರ್ಟ್ಸ್ ಅಂಡ್ ಕಾಮರ್ಸ್ ಕಾಲೇಜ್ ಇತಿಹಾಸ ವಿಭಾಗದ ಬಿ.ಎ. 6ನೇ ಸೆಮಿಸ್ಟರ್ ವಿದ್ಯಾರ್ಥಿಗಳ ಪ್ರಾಜೆಕ್ಟ್ ವರದಿ ಮೌಲ್ಯಮಾಪನ ಕಾರ್ಯದಲ್ಲಿ ಬಾಹ್ಯ ಪರಿವೀಕ್ಷಕರಾಗಿ ಮಾತನಾಡಿದ ಅವರು, ಇಸ್ಲಾಂ ಧರ್ಮದ ಕಟ್ಟಡಗಳಲ್ಲಿ ಕಾಣಸಿಗುವ ಮಿಹ್ರಾಬ್, ಕಿಬ್ಲಾ, ಕಮಾನು, ಗುಮ್ಮಟ, ಮಿನಾರ ಹಾಗೂ ಜ್ಯಾಮಿತೀಯ ವಿನ್ಯಾಸಗಳು ಇಸ್ಲಾಂ ತತ್ವ-ಸಿದ್ಧಾಂತ ಮತ್ತು ನಂಬಿಕೆಗಳ ಪ್ರತೀಕಗಳಾಗಿವೆ ಎಂದು ವಿವರಿಸಿದರು.




> "ಇಸ್ಲಾಂ ವಾಸ್ತುಕಲೆಯ ಪ್ರತಿಯೊಂದು ಕಮಾನು, ಗುಮ್ಮಟ ಮತ್ತು ವಿನ್ಯಾಸವೂ ಧಾರ್ಮಿಕ ತತ್ವ ಹಾಗೂ ಆಧ್ಯಾತ್ಮಿಕ ಸಂದೇಶವನ್ನು ಹೊತ್ತಿರುತ್ತದೆ."
>
> – ಡಾ. ಅಪ್ಪಣ್ಣ ಹಂಜೆ

ಮಸೀದಿ, ದರ್ಗಾ, ಈದ್ಗಾ, ಗೋರಿ ಹಾಗೂ ಸಮಾಧಿಗಳಂತಹ ಧಾರ್ಮಿಕ ಕಟ್ಟಡಗಳನ್ನು ಕೇವಲ ವಾಸ್ತುಶೈಲಿಯಾಗಿ ನೋಡದೇ, ಅವುಗಳ ಹಿಂದಿರುವ ಆಧ್ಯಾತ್ಮಿಕ ಹಾಗೂ ಸಾಂಸ್ಕೃತಿಕ ಪರಿಕಲ್ಪನೆಗಳೊಂದಿಗೆ ಅರ್ಥೈಸಿಕೊಳ್ಳಬೇಕು ಎಂದರು.

ಇತಿಹಾಸ ವಿಭಾಗದ ಉಪನ್ಯಾಸಕಿ ರಾಜೇಶ್ವರಿ ಬಾರಕೇರ ಮಾತನಾಡಿ, ಇಸ್ಲಾಂ ವಾಸ್ತುಕಲೆ ಕಲಾತ್ಮಕತೆ, ವೈಜ್ಞಾನಿಕತೆ ಮತ್ತು ಸಾಂಸ್ಕೃತಿಕ ಮೌಲ್ಯಗಳ ಸಮನ್ವಯವಾಗಿದ್ದು, ವಿಭಿನ್ನ ಸಂಸ್ಕೃತಿಗಳ ನಡುವೆ ಸೌಹಾರ್ದತೆಯ ಸೇತುವೆಯಾಗಿ ಕಾರ್ಯನಿರ್ವಹಿಸಿದೆ ಎಂದು ಹೇಳಿದರು.

ಪ್ರಾಚಾರ್ಯ ಎಸ್.ಎಚ್. ಬಡೇಖಾನ ಅಧ್ಯಕ್ಷೀಯ ನುಡಿಗಳಲ್ಲಿ ಮಾತನಾಡಿ, ಧಾರ್ಮಿಕ ಕಟ್ಟಡಗಳ ಅಧ್ಯಯನ ಮಾಡುವಾಗ ಅವುಗಳ ತಾತ್ವಿಕ ಮತ್ತು ಧಾರ್ಮಿಕ ಹಿನ್ನೆಲೆಯನ್ನು ಅರ್ಥೈಸಿಕೊಳ್ಳುವುದು ಅತ್ಯಗತ್ಯ. ಇಲ್ಲವಾದರೆ ಅಧ್ಯಯನ ಕೇವಲ ಭೌತಿಕ ವಿವರಣೆಗೆ ಸೀಮಿತವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸಮಾಜಶಾಸ್ತ್ರ ಉಪನ್ಯಾಸಕಿ ಸವಿತಾ ಆರಾಧ್ಯಮಠ ವಂದಿಸಿದರು. ಕನ್ನಡ ಉಪನ್ಯಾಸಕಿ ಕವಿತಾ ಅಜನಾಳ ಕಾರ್ಯಕ್ರಮ ನಿರೂಪಿಸಿದರು. ಇತಿಹಾಸ ವಿಭಾಗದ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಡಿ. ಬಿ. ಕ್ರಿಷ್ಣಪ್ಪ ಜನ್ಮದಿನ ಆಚರಣೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕರಾದ, ಅಂಬೇಡ್ಕರ್ ತತ್ವಗಳನ್ನು ಸಮಾಜದಲ್ಲಿ ಸಾರಿದ ಹಾಗೂ ಅಸ್ಪೃಶ್ಯತೆ ವಿರುದ್ಧ ಹೋರಾಟ ನಡೆಸಿದ ಧೀಮಂತ ನಾಯಕ ದಿ. ಬಿ. ಕ್ರಿಷ್ಣಪ್ಪ ಅವರ 89ನೇ ಜನ್ಮದಿನಾಚರಣೆಯನ್ನು ಬೆಟಗೇರಿಯ ಮಂಜು ಬುದ್ಧಿಮಾಂದ್ಯ ಮಕ್ಕಳ ಶಿಕ್ಷಣ ಸಂಸ್ಥೆಯಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಸಿಗೆ ನೀರು ಹಾಕುವ ಮೂಲಕ ಪರಿಸರ ಜಾಗೃತಿ ಸಂದೇಶ ನೀಡಲಾಯಿತು. ಬಳಿಕ ಶಾಲೆಯ ವಿಶೇಷ ಮಕ್ಕಳಿಗೆ ಹಾಲು ಮತ್ತು ಬ್ರೆಡ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ರಾಷ್ಟ್ರ ಪ್ರಶಸ್ತಿ ವಿಜೇತ ನಿವೃತ್ತ ಶಿಕ್ಷಕರು ಹಾಗೂ ಡಿಎಸ್‌ಎಸ್ ರಾಜ್ಯ ಸಂಚಾಲಕರಾದ ಎಸ್.ಎನ್. ಬಳ್ಳಾರಿ ಮಾತನಾಡಿ, ದಿ. ಬಿ. ಕ್ರಿಷ್ಣಪ್ಪ ಅವರು ದಲಿತ ಸಮುದಾಯದ ಹಕ್ಕುಗಳಿಗಾಗಿ ಜೀವನಪೂರ್ತಿ ಹೋರಾಟ ನಡೆಸಿದ ಅಪರೂಪದ ನಾಯಕರು ಎಂದು ಸ್ಮರಿಸಿದರು.



ಕಾರ್ಯಕ್ರಮದಲ್ಲಿ ಡಿಎಸ್‌ಎಸ್ ಜಿಲ್ಲಾ ಸಂಚಾಲಕ ದುರುಗಪ್ಪ ಎಲ್.ಎಚ್., ಜಿಲ್ಲಾ ಸಂಘಟನಾ ಸಂಚಾಲಕ ಸತೀಶ ಹುಲಿ, ಪ್ರಕಾಶ ಹೊಸಳ್ಳಿ, ಸಂಗಪ್ಪ ಹೊಸಮನಿ, ಕ್ರಿಷ್ಣಾ ಪೂಜಾರ, ಆರ್.ಎಲ್. ಮೇಳೆನವರ, ಬೂದಪ್ಪ ಹುಣಸಿಮರದ, ವೀರೇಂದ್ರಸಿಂಗ್ ರಜಪುತ, ನಾಗರಾಜ ಗುಟ್ಟಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

**ಯುವಜನತೆಗೆ ಭಾರತೀಯ ಸಂಸ್ಕಾರ ಮತ್ತು ರಾಷ್ಟ್ರಭಕ್ತಿ ಅವಶ್ಯ: ಪ್ರವೀಣ ಬೆನ್ನೂರ ಎಚ್ಚರಿಕೆ**

# ಧರ್ಮ ಮರೆತರೆ ಸಮಾಜ ದಾರಿ ತಪ್ಪುತ್ತದೆ!

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಪೀಳಿಗೆಗೆ ಧರ್ಮ ಸಂಸ್ಕಾರ, ಧರ್ಮ ಶಿಕ್ಷಣ ಹಾಗೂ ಸನಾತನ ಭಾರತೀಯ ಸಂಸ್ಕೃತಿಯನ್ನು ಕಲಿಸುವುದು ಇಂದಿನ ಕಾಲದ ತುರ್ತು ಅಗತ್ಯವಾಗಿದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ಸಮನ್ವಯಕ ಪ್ರವೀಣ ಬೆನ್ನೂರ ಹೇಳಿದರು.

ನಗರದ ರಾಜೀವ ಗಾಂಧಿ ನಗರದ ನವಲೆ ಕಟ್ಟಡದಲ್ಲಿ ಹಿಂದೂ ಜನಜಾಗೃತಿ ಸಮಿತಿ ಹಾಗೂ ಭಾವಸಾರ ವ್ಹಿಜನ್ ಇಂಡಿಯಾ ಗದಗ ಸಂಯುಕ್ತಾಶ್ರಯದಲ್ಲಿ ಭಾನುವಾರ ಆಯೋಜಿಸಿದ್ದ ವಿಶೇಷ ಹಿಂದೂ ಜನಜಾಗೃತಿ ಕಾರ್ಯಕ್ರಮದಲ್ಲಿ ಅವರು ಉಪನ್ಯಾಸ ನೀಡಿದರು.

ಪಾಶ್ಚಾತ್ಯ ಸಂಸ್ಕೃತಿಯ ಅಂಧಾನುಕರಣೆ ಮತ್ತು ಧರ್ಮ ವಿಮುಖತೆಯಿಂದ ಯುವಜನತೆ ದಾರಿ ತಪ್ಪುತ್ತಿದೆ. ಇದಕ್ಕೆ ಪರಿಹಾರವೆಂದರೆ ಬಾಲ್ಯದಿಂದಲೇ ಮಕ್ಕಳಿಗೆ ಧರ್ಮ ಶಿಕ್ಷಣ, ರಾಷ್ಟ್ರಭಕ್ತಿ




ಮತ್ತು ಭಾರತೀಯ ಸಂಸ್ಕಾರಗಳನ್ನು ಬಿತ್ತುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 'ಲವ್ ಜಿಹಾದ್' ಕುರಿತು ಕಳವಳ ವ್ಯಕ್ತಪಡಿಸಿದ ಅವರು, ಹಿಂದೂ ಯುವತಿಯರನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವ ಷಡ್ಯಂತ್ರಗಳ ವಿರುದ್ಧ ಸಮಾಜ ಎಚ್ಚರಗೊಳ್ಳಬೇಕು. ಮಹಿಳೆಯರು ಮತ್ತು ಯುವತಿಯರಲ್ಲಿ ಧರ್ಮರಕ್ಷಣೆ, ಸ್ವಸಂರಕ್ಷಣೆ ಹಾಗೂ ಆತ್ಮಗೌರವದ ಜಾಗೃತಿ ಮೂಡಿಸಲು 'ರಣರಾಗಿಣಿ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

> "ಧರ್ಮ ಶಿಕ್ಷಣ ಮತ್ತು ಭಾರತೀಯ ಸಂಸ್ಕಾರಗಳನ್ನು ಮಕ್ಕಳಿಗೆ ಬಾಲ್ಯದಲ್ಲೇ ನೀಡಿದರೆ ಮಾತ್ರ ಸಮಾಜದ ಭವಿಷ್ಯ ಸುರಕ್ಷಿತವಾಗಿರುತ್ತದೆ."
>
> – ಪ್ರವೀಣ ಬೆನ್ನೂರ

ಮುಖ್ಯ ಅತಿಥಿಯಾಗಿ ಮಾತನಾಡಿದ ಭಾವಸಾರ ವ್ಹಿಜನ್ ಇಂಡಿಯಾದ ನಿರ್ದೇಶಕ ಅಶ್ವಥ್ ಸುಲಾಖೆ, ಸನಾತನ ಧರ್ಮದ ಮೌಲ್ಯಗಳನ್ನು ಉಳಿಸುವುದು ಪ್ರತಿಯೊಬ್ಬ ಹಿಂದುವಿನ ಕರ್ತವ್ಯ ಎಂದು ಅಭಿಪ್ರಾಯಪಟ್ಟರು.

ಸನಾತನ ಸಂಸ್ಥೆಯ ಸಾಧಕಿ ಜಯಶ್ರೀ ಹೆಬಸೂರ ಮಾತನಾಡಿ, ವ್ಯಕ್ತಿ ನಿರ್ಮಾಣದಿಂದ ರಾಷ್ಟ್ರ ನಿರ್ಮಾಣ ಎಂಬ ಧ್ಯೇಯದೊಂದಿಗೆ ಸನಾತನ ಸಂಸ್ಥೆ ಧರ್ಮ ಜಾಗೃತಿ ಹಾಗೂ ಭಾರತೀಯ ಸಂಸ್ಕಾರದ ಉಳಿವಿಗಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಭಾವಸಾರ ವ್ಹಿಜನ್ ಇಂಡಿಯಾ ಅಧ್ಯಕ್ಷ ಶ್ರೀಪಾದ ವೈಕುಂಠೆ ಅಧ್ಯಕ್ಷತೆ ವಹಿಸಿದ್ದರು. ವೇದಿಕೆಯಲ್ಲಿ ಗದಗ ಭಾವಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಪರಶುರಾಮ ಮಹೇಂದ್ರಕರ, ಸಮಾಜ ಟ್ರಸ್ಟ್ ಸದಸ್ಯ ತುಕಾರಾಮ ಬೇಂದ್ರೆ ಉಪಸ್ಥಿತರಿದ್ದರು.

ಕಾರ್ಯಕ್ರಮದ ಆತಿಥ್ಯ ವಹಿಸಿದ್ದ ವಿಜಯಾ ಪರಶುರಾಮ ನವಲೆ ದಂಪತಿಯನ್ನು ಸನ್ಮಾನಿಸಲಾಯಿತು.

ಭಾಗ್ಯಶ್ರೀ ನವಲೆ ಪ್ರಾರ್ಥಿಸಿದರು. ರಾಘವೇಂದ್ರ ನವಲೆ ಸ್ವಾಗತಿಸಿದರು. ರಾಜು ಕಪಟಕರ ಕಾರ್ಯಕ್ರಮ ನಿರೂಪಿಸಿದರು. ಸುಧಾ ವೈಕುಂಠೆ ವಂದಿಸಿದರು.

ಜೆ.ಡಿ. ಉತ್ತರಕರ, ರಾಜೇಂದ್ರ ತ್ರಿಮಲ್ಲೆ, ಈರಣ್ಣ ಬೆಳಮಕರ, ಷಣ್ಮುಖ ಸುಲಾಖೆ, ನಾಗರಾಜ ವಾದೋಣೆ, ವೀಣಾ ಸುಲಾಖೆ, ಸುರೇಖಾ ಪಾಟೀಲ, ವಿಜಯಲಕ್ಷ್ಮೀ ದೇಸಾಯಿ, ದ್ಯಾಮಕ್ಕ ಬಸೆಟ್ಟಿ, ಅಕ್ಕಮ್ಮ ಅಬ್ಬಿಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ

## ಗ್ರಾಮ ಪಂಚಾಯತ ಕಾರ್ಯಾಲಯ ಮುರಡಿ ವ, ಮುರುಡಿತಾಂಡಾ

ತಾಲ್ಲೂಕ:ಮುಂಡರಗಿ ಇ-ಮೇಲ್:muradi.mun.gdg@gmail.com ಜಿಲ್ಲೆ:ಗದಗ

ಸಂ.ಗ್ರಾ.ಪಂ.ಮು/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2026-27 ದಿನಾಂಕ: 09/06/2026

### -: ದರಪಟ್ಟಿ ಪ್ರಕಟಣೆ :-

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಮುರುಡಿ ವ ಮುರುಡಿತಾಂಡಾ ಇವರು 2025-26ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರ್ಮ ಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | 1514002019-25-1013 ಚಿಕ್ಕವಡ್ಡಟ್ಟಿ ಗ್ರಾಸಹಿ ಪ್ರಾ ಶಾಲೆಯ ದಕ್ಷಿಣ ಭಾಗದಿಂದ ಉತ್ತರ ಬಾಗದವರೆಗೆ ಕಾಂಪೌಂಡ್ ನಿರ್ಮಾಣ 1514002019/AV/93393042892361354 | 388639.00 | 00 | ಖಾಲಿ ಟೆಂಡರ್ ಫಾರ್ಮ ಅನ್ನು ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು |

1) ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ:-10/06/2026 ರಿಂದ 18/06/2026 ರವರೆಗೆ
2) ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ:-18/06/2026 ಮಧ್ಯಾಹ್ನ 12.30 ಗಂಟೆವರೆಗೆ.
3) ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ:-18/06/2026 ರ ಮಧ್ಯಾಹ್ನ 12.30 ನಂತರ
4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಲು ಗ್ರಾಮ ಪಂಚಾಯತ ಕಾರ್ಯಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

**ನಿಬಂಧನೆಗಳು**

ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಮುರುಡಿ ವ ಮುರುಡಿತಾಂಡಾ ದಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಮುರುಡಿ ವ ಮುರುಡಿತಾಂಡಾ

ಸಹಿ ಆಗಿದೆ/-
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಮುರುಡಿ ವ ಮುರುಡಿತಾಂಡಾ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka